# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು

EDITOR : S VENKATESULU

ANANTHA JANA SAKTHI

KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 37 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಶನಿವಾರ ದಿನಾಂಕ : 15-08-2026 ಪುಟ : 04 ಬೆಲೆ : 2-00


## ಆರೋಗ್ಯ ಇಲಾಖೆ ಕಾರ್ಯದರ್ಶಿಗೆ ಸಿಎಂ ಕ್ಲಾಸ್: ಗುಟ್ಕಾ ನಿಷೇಧ ಆದೇಶ ಶೀಘ್ರದಲ್ಲೇ ಹಿಂಪಡೆಯಲು ಸೂಚನೆ

ಬೆಂಗಳೂರು, ಆ.14: ಕರ್ನಾಟಕದಲ್ಲಿ ಗುಟ್ಕಾ ಮಾರಾಟ ನಿಷೇಧಕ್ಕೆ ಸಂಬಂಧಿಸಿದ ಆದೇಶವನ್ನು ವಾಪಸ್ ಪಡೆಯುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೂಚನೆ ನೀಡಿದ್ದಾರೆ. ಗುಟ್ಕಾ ನಿಷೇಧ ಆದೇಶದ ಕುರಿತು ಬಹುತೇಕ ಶಾಸಕರಿಂದ, ಅದರಲ್ಲಿಯೂ ಕಾಂಗ್ರೆಸ್ ಶಾಸಕರಿಂದ ತೀವ್ರ ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಈ ಕುರಿತು ಚರ್ಚಿಸಲು ಹಿರಿಯ ಶಾಸಕರು ನಿನ್ನೆ ಸಿಎಂ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ್ದರು. ಆದೇಶದ ಬಗ್ಗೆ ತಮಗೆ ಮಾಹಿತಿ ಇರಲಿಲ್ಲ ಎಂದು ಈ ವೇಳೆ ಸಿಎಂ ಸ್ಪಷ್ಟಪಡಿಸಿದ್ದರು. ಬಳಿಕ ನಡೆದ ಸಂಪುಟ ಸಭೆಯಲ್ಲೂ ಈ ವಿಚಾರ ಪ್ರಸ್ತಾಪವಾಗಿದೆ. ಆರೋಗ್ಯ ಇಲಾಖೆ ಕಾರ್ಯದರ್ಶಿಯನ್ನು ತರಾಟೆಗೆ ತೆಗೆದುಕೊಂಡ ಸಿಎಂ ಡಿ.ಕೆ. ಶಿವಕುಮಾರ್, ತಮ್ಮ ಗಮನಕ್ಕೆ ತರದೇ ಇಂತಹ ಗಂಭೀರ ಆದೇಶವನ್ನು ಹೇಗೆ ಹೊರಡಿಸಲಾಗಿದೆ ಎಂದು ಪ್ರಶ್ನಿಸಿದ್ದಾರೆ. ಸುಮಾರು ಏಳೆಂಟು ಜಿಲ್ಲೆಯ ಅಡಿಕೆ ಬೆಳೆಗಾರರ ಮೇಲೆ ಈ ನಿರ್ಧಾರ ಪರಿಣಾಮ

2ನೇ ಪುಟಕ್ಕೆ...

# 224 ಶಾಸಕರೂ ನನಗೆ ಒಂದೇ,

## ನನ್ನ ಅಧಿಕಾರವನ್ನು ಯಾರ ವಿರುದ್ಧವೂ ಬಳಸುವುದಿಲ್ಲ: ಡಿಕೆಶಿ

ಬೆಂಗಳೂರು" ಪ್ರತಿಯೊಬ್ಬ ವ್ಯಕ್ತಿಗೂ ಹೊಸ ಆಲೋಚನೆಗಳಿರುತ್ತವೆ. ಹೊಸ ಆಲೋಚನೆ, ಭರವಸೆ, ನಂಬಿಕೆ ಮೂಲಕ ಜನರ ವಿಶ್ವಾಸ ಗಳಿಸುವುದು ನಮ್ಮ ಕರ್ತವ್ಯ. ನಮ್ಮ ಶಾಸಕರು, ವಿರೋಧ ಪಕ್ಷದ ಶಾಸಕರು, ನಾಯಕರು, ನಮ್ಮ ಸಚಿವ ಸಂಪುಟದ ಎಲ್ಲರನ್ನು ವಿಶ್ವಾಸಕ್ಕೆ ಪಡೆದು ರಾಜ್ಯದ ಜನರ ಅಭಿವೃದ್ಧಿಗೆ ಟೀಮ್ ಕರ್ನಾಟಕವಾಗಿ ಕೆಲಸ ಮಾಡಬೇಕು ಎಂದು ಸಿಎಂ ಡಿಕೆ ಶಿವಕುಮಾರ್ ಅವರು ಕರೆ ನೀಡಿ-ದರು.

ವಿಧಾನಸಭೆಯಲ್ಲಿ ಸಚಿವ ಸಂಪುಟ ಸಹೋದ್ಯೋಗಿಗಳನ್ನು ಸದನಕ್ಕೆ ಪರಿಚಯಿಸಿ ಶಿವಕುಮಾರ್ ಅವರು ಶುಕ್ರವಾರ ಮಾತನಾಡಿದರು. ಜೂನ್ 3ರಂದು ನಮ್ಮ ಪಕ್ಷದ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ, ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಕೆ ಸಿ ವೇಣುಗೋಪಾಲ್ ಹಾಗೂ ರಣದೀಪ್



ಸಿಂಗ್ ಸುರ್ಜೆವಾಲ ಅವರು ಚರ್ಚೆ ಮಾಡಿ 139 ಶಾಸಕರ ಬೆಂಬಲದೊಂದಿಗೆ ನನ್ನನ್ನು ಈ ಸ್ಥಾನದಲ್ಲಿ ಕೂರಿಸಿದ್ದಾರೆ. ಈ ಹಿಂದೆ ಅನೇಕ ನಾಯಕರು ರಾಜ್ಯದ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ್ದು, ಕಳೆದ 3 ವರ್ಷಗಳಿಂದ ಸಿದ್ದರಾಮಯ್ಯ ಅವರು ಸಿಎಂ ಆಗಿ ನಾನು ಡಿಸಿಎಂ ಆಗಿ ಕೆಲಸ ಮಾಡಿದ್ದೆವು. ಇದು ಅದರ ಮುಂದುವರಿದ ಸರ್ಕಾರ ಎಂದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಚುನಾವಣೆಯಲ್ಲಿ ಜನರು ವಿವಿಧ ರೀತಿಯಲ್ಲಿ ಏನೇ ತೀರ್ಮಾನ ಮಾಡಿದ್ದರೂ ನಾವು ಒಪ್ಪಬೇಕು. ಆದರೆ ಈಗ ನನಗೆ ಸಿಕ್ಕಿರುವ ಅವಕಾಶದಲ್ಲಿ 224 ಶಾಸಕರೂ ನನ್ನ ದೃಷ್ಟಿಯಲ್ಲಿ ಒಂದೇ. ನಾನು ಈ ಸ್ಥಾನದಲ್ಲಿ ಕೂತು ಎಲ್ಲರನ್ನು ಒಟ್ಟಿಗೆ ಕರೆದೊಯ್ಯಬೇಕು ಎಂಬುದು ನನ್ನ ಆಸೆ ಎಂದು ಹೇಳಿದರು.

ಕಂಠಿ ಅವರ ಕಾಲದಿಂದ ಸಿದ್ದರಾಮಯ್ಯ ಅವರ ವರೆಗೆ ಅನೇಕ ರಾಜಕೀಯ ಮುತ್ಸದ್ದಿಗಳು ಕಡಿದಾಳು ಮಂಜಪ್ಪ, ಕೆಂಗಲ್ ಹನುಮಂತಯ್ಯ, ದೇವರಾಜ ಅರಸು, ಗುಂಡೂರಾವ್, ನಿಜಲಿಂಗಪ್ಪ, ಬಿಡಿ ಜತ್ತಿ, ರಾಮಕೃಷ್ಣ ಹೆಗಡೆ, ವೀರೇಂದ್ರ ಪಾಟೀಲ್, ಬಂಗಾರಪ್ಪ, ವೀರಪ್ಪ ಮೋಯ್ಲಿ, ದೇವೇಗೌಡರು, ಎಸ್ ಎಂ ಕೃಷ್ಣ, ಧರಂ ಸಿಂಗ್, ಯಡಿಯೂರಪ್ಪ, ಬೊಮ್ಮಾಯಿ, ಸದಾನಂದ ಗೌಡರು, ಜಗದೀಶ್ ಶೆಟ್ಟರ್, ಸಿದ್ದರಾಮಯ್ಯ ಅವರ ಆಡಳಿತ ನೋಡಿದ್ದೇವೆ. ಎಲ್ಲರೂ ತಮ್ಮದೇ ಆದ ರೀತಿಯಲ್ಲಿ ನಾಡಿಗೆ

2ನೇ ಪುಟಕ್ಕೆ...

## ದೇಶದ್ರೋಹಿ ಅನ್ನೋದಕ್ಕೆ ಇದಕ್ಕಿಂತೆ ಸಾಕ್ಷಿ ಬೇಕಾ?

### ಧ್ವಜಾರೋಹಣದಿಂದ ವಿನಾಯಿತಿ ಕೇಳಿದ ಜಮಿರ್ ವಿರುದ್ಧ ಬಿಜೆಪಿ ಆಕ್ರೋಶ

ಬೆಂಗಳೂರು : ವಿಜಯನಗರ ಜಿಲ್ಲಾ ಉಸ್ತುವಾರಿ ಹಾಗೂ ಸ್ವಾತಂತ್ರ್ಯ ದಿನಾಚರಣೆಯ ಧ್ವಜಾರೋಹಣಕ್ಕೆ ಸಚಿವ ಜಮೀರ್ ಅಹಮ್ಮದ್ ಖಾನ್ ವಿನಾಯಿತಿ ಕೇಳಿ ಸಿಎಂಗೆ ಬರೆದ ಪತ್ರ ಭಾರೀ ಸಂಚಲನ ಮೂಡಿಸಿದೆ. ಇದು ಸದದನಲ್ಲೂ ಬಿಜೆಪಿ ನಾಯಕರು ಪ್ರಸ್ತಾಪಿಸಿ ಸರ್ಕಾರದ ವಿರುದ್ಧ ಮುಗಿಬಿದ್ದಿದ್ದಾರೆ. ಸ್ವಾತಂತ್ರ್ಯ ದಿನಾಚರಣೆದಂದು ಧ್ವಜಾರೋಹಣಕ್ಕೆ ಸಮಯ ಇಲ್ಲ ಎಂದು ಹೇಳುವ ಮೂಲಕ ಜಮೀರ್ ಅಹಮದ್ ದೇಶದ್ರೋಹ ಎಸಗಿದ್ದಾರೆ ಅನ್ನೋದಕ್ಕೆ ಇದಕ್ಕಿಂತ ಸಾಕ್ಷಿ ಬೇಕಾ? ಎಂದು ವಿಪಕ್ಷ ನಾಯಕರ ಆರ್ ಅಶೋಕ್ ವಾಗ್ದಾಳಿ ನಡೆಸಿದ್ದಾರೆ.

ಈ ಸಂಬಂಧ ಎಕ್ಸ್ ಪೋಸ್ಟ್ ಮಾಡಿರುವ ಅವರು, "ಕರ್ನಾಟಕದ



ಕಾಂಗ್ರೆಸ್ ಸರ್ಕಾರದ ನಿಜವಾದ ಬಣ್ಣ ಮತ್ತೊಮ್ಮೆ ನಡುರಸ್ತೆಯಲ್ಲಿ ಬಯಲಾಗಿದೆ. ವಿಜಯನಗರ ಜಿಲ್ಲೆಯಲ್ಲಿ ಆಗಸ್ಟ್ 15ರ ಪವಿತ್ರ ಸ್ವಾತಂತ್ರ್ಯ ದಿನಾಚರಣೆಯಂದು ರಾಷ್ಟ್ರಧ್ವಜಾರೋಹಣ ಮಾಡಲು ನನಗೆ "ಸಮಯವಿಲ್ಲ", ಹಾಗಾಗಿ ಅದ-ರಿಂದ ವಿನಾಯಿತಿ ನೀಡಿ ಎಂದು ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹಮದ್ ಖಾನ್ ಮುಖ್ಯಮಂತ್ರಿಗಳಿಗೆ ಅಧಿಕೃತವಾಗಿ ಪತ್ರ ಬರೆದಿದ್ದಾರೆ. ಸ್ಥಳೀಯ ಸಂಸ್ಥೆಗಳ ಚುನಾವಣೆ, ಉಪಚುನಾವಣೆ ಮತ್ತು ಪಕ್ಷದ ಸಂಘಟನೆಯಲ್ಲಿ ಬ್ಯುಸಿಯಾಗಿದ್ದೇನೆ ಎಂಬುದು ಇವರು ನೀಡಿರುವ ಲಜ್ಜೆಗೆಟ್ಟ ನೆಪ" ಎಂದು ಕಿಡಿ ಕಾರಿದ್ದಾರೆ.

"ರಾಷ್ಟ್ರಧ್ವಜ ಹಾರಿಸುವುದಕ್ಕೂ ಮನಸ್ಸಿಲ್ಲದಷ್ಟು ದೇಶದ್ರೋಹಿಗಳು ಈ ಕಾಂಗ್ರೆಸ್ ಸರ್ಕಾರದಲ್ಲಿದ್ದಾರೆ. ಒಬ್ಬ ಜವಾಬ್ದಾರಿಯುತ ಸಚಿವನಿಗೆ ಸ್ವಾತಂತ್ರ್ಯ ದಿನಾಚರಣೆಯಂದು ತ್ರಿವರ್ಣ ಧ್ವಜಕ್ಕೆ ಗೌರವ ಸಲ್ಲಿಸುವ ಪವಿತ್ರ ಕರ್ತವ್ಯಕ್ಕಿಂತ ಪಕ್ಷ ರಾಜಕೀಯವೇ ದೊಡ್ಡದಾಯಿತೇ?

2ನೇ ಪುಟಕ್ಕೆ...

## ಮಾನನಷ್ಟ ಕೇಸ್ ರದ್ದು, ರಾಹುಲ್‌ಗೆ ಬಿಗ್ ರಿಲೀಫ್

ನವದೆಹಲಿ: ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ಸುಪ್ರೀಂ ಕೋರ್ಟ್‌ನಲ್ಲಿ ದೊಡ್ಡ ಮಟ್ಟದ ರಿಲೀಫ್ ಸಿಕ್ಕಿದೆ.



ವಿನಾಯಕ ದಾಮೋದರ್ ಸಾವರ್ಕರ್ ವಿರುದ್ಧ ನೀಡಿ-ದ್ದ ಹೇಳಿಕೆಗೆ ಸಂಬಂಧಿಸಿದಂತೆ ರಾಹುಲ್ ಗಾಂಧಿ ವಿರುದ್ಧ ದಾಖಲಾಗಿದ್ದ ಕ್ರಿಮಿನಲ್ ಮಾನನಷ್ಟ ಮೊಕದ್ದಮೆ ಹಾಗೂ ಮ್ಯಾಜಿಸ್ಟ್ರೇಟ್ ನ್ಯಾಯಾಲಯ ಜಾರಿ ಮಾಡಿದ್ದ ಸಮನ್ಸ್ ಅನ್ನು ಸುಪ್ರೀಂ ಕೋರ್ಟ್ ಗುರುವಾರ ರದ್ದುಗೊಳಿಸಿದೆ.

ರ್‍ಯಾಲಿಯೊಂದರಲ್ಲಿ ರಾಹುಲ್ ಗಾಂಧಿಯವರು ಸಾವರ್ಕರ್ ಅವರನ್ನು ಉದ್ದೇಶಪೂರ್ವಕವಾಗಿ ಅವಮಾನಿಸಿದ್ದಾರೆ ಎಂದು ಆರೋಪಿಸಿ ವಕೀಲ ನೃಪೇಂದ್ರ ಪಾಂಡೆ ಎಂಬುವವರು ದೂರು ದಾಖಲಿಸಿದ್ದರು.

ರಾಹುಲ್ ಗಾಂಧಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ದೀಪಂಕರ್ ದತ್ತಾ ಅವರಿದ್ದ ಪೀಠವು,

2ನೇ ಪುಟಕ್ಕೆ...

## ಡಿಕೆಶಿ ಮಹಿಳಾ ಸಚಿವರಿಲ್ಲ: ವಿಧಾನಸೌಧ ಆವರಣದಲ್ಲಿ ಬಿಜೆಪಿ ಶಾಸಕರ ಪ್ರತಿಭಟನೆ

ಬೆಂಗಳೂರು: ಇತ್ತೀಚೆಗೆ ವಿಸ್ತರಣೆಯಾದ ಡಿ.ಕೆ. ಶಿವಕುಮಾರ್ ನೇತೃತ್ವದ ಸಚಿವ ಸಂಪುಟದಲ್ಲಿ ಮಹಿಳಾ ಶಾಸಕರಿಗೆ ಸಚಿವರಿಗೆ ಸ್ಥಾನ ನೀಡದಿರುವುದನ್ನು ಖಂಡಿಸಿ ಬಿಜೆಪಿ ಶಾಸಕರು ಇಂದು ಶುಕ್ರವಾರ ವಿಧಾನಸೌಧದ ಆವರಣದಲ್ಲಿ ಪ್ರತಿಭಟನೆ ನಡೆಸಿದರು.

ಆಡಳಿತಾರೂಢ ಕಾಂಗ್ರೆಸ್ ಸರ್ಕಾರವನ್ನು "ಮಹಿಳಾ

2ನೇ ಪುಟಕ್ಕೆ...




## ಧ್ವಜ ಕೇಳೋರಿಲ್ಲ: ದೇಶದ ಏಕೈಕ ಹುಬ್ಬಳ್ಳಿಯ ಖಾದಿ ರಾಷ್ಟ್ರಧ್ವಜ ತಯಾರಿಕಾ ಕೇಂದ್ರ ಇದೀಗ ಮುಚ್ಚುವ ಭೀತಿ




ಹುಬ್ಬಳ್ಳಿ : ದೇಶಾದ್ಯಂತ ಸ್ವಾತಂತ್ರ್ಯ ದಿನದ ಸಂಭ್ರಮ ಜೋರಾಗಿದೆ. ಆದರೆ ರಾಷ್ಟ್ರಧ್ವಜಗಳು ಮಾರಾಟವಾಗದೇ ಇರುವುದರಿಂದ ದೇಶದ ಏಕೈಕ ರಾಷ್ಟ್ರಧ್ವಜ ತಯಾರಿಕಾ ಸಂಸ್ಥೆ ಸಿಬ್ಬಂದಿ ಕಂಗಾಲಾಗಿದ್ದಾರೆ. ರಾಷ್ಟ್ರದ ಅಧಿಕೃತ ಏಕೈಕ ರಾಷ್ಟ್ರಧ್ವಜ ತಯಾರಿಕೆ ಸಂಸ್ಥೆಯಲ್ಲಿ ಕೋಟಿಗೂ ಅಧಿಕ ಮೌಲ್ಯದ ರಾಷ್ಟ್ರಧ್ವಜಗಳು ಮಾರಾಟವಾಗದೆ ಹಾಗೆ ಉಳಿದಿವೆ. ಪಾಲಿಸ್ಟರ್ ಧ್ವಜಗಳ ಮಾರಾಟಕ್ಕೆ ಸರ್ಕಾರ ಅವಕಾಶ ನೀಡಿ-ದ್ದರಿಂದ, ಇದೀಗ ಖಾದಿಯಿಂದ ತಯಾರಾಗುವ ಧ್ವಜಗಳನ್ನು ಕೇಳುವರಿಲ್ಲದಂತಾಗಿದೆ. ಹಾಗಾಗಿ ಸಂಸ್ಥೆಯನ್ನೇ ಮುಚ್ಚುವ ಸ್ಥಿತಿ ಎದುರಾಗಿದೆ. ಆಗಸ್ಟ್ 15 ಮತ್ತು ಜನವರಿ 26 ಭಾರತೀಯರ ಪಾಲಿಗೆ ಮರೆಯಲಾರದ ದಿನಗಳು. ಸ್ವಾತಂತ್ರ್ಯ ದಿನ ಮತ್ತು ಗಣರಾಜ್ಯೋತ್ಸವ ದಿನವನ್ನು ದೇಶಾದ್ಯಂತ

2ನೇ ಪುಟಕ್ಕೆ..

## ವಿಧಾನ ಪರಿಷತ್ ಸಭಾಪತಿಯಾಗಿ ಸಲೀಂ ಅಹಮದ್ ಆಯ್ಕೆ

ಬೆಂಗಳೂರು: ಬಸವರಾಜ ಹೊರಟ್ಟಿ ಅವರ ರಾಜೀನಾಮೆಯಿಂದ ತೆರವಾಗಿದ್ದ ವಿಧಾನ ಪರಿಷತ್ ಸಭಾಪತಿ ಸ್ಥಾನಕ್ಕೆ ಇಂದು ಸಲೀಂ ಅಹಮದ್ ಅವರನ್ನ ಆಯ್ಕೆ ಮಾಡಲಾಯಿತು.

ಆರಂಭದಲ್ಲಿ ಬಿ.ಕೆ ಹರಿಪ್ರಸಾದ್ ಅವರು ಸಲೀಂ ಅಹಮದ್ ಅವರ ಹೆಸರನ್ನು ಸಭಾಪತಿ ಸ್ಥಾನಕ್ಕೆ ಪ್ರಸ್ತಾಪ ಮಾಡಿದರು. ಈ ಮಧ್ಯೆ ಪೂಜಾರ್ ಪರವಾಗಿ ಛಲವಾದಿ ನಾರಾಯಣಸ್ವಾಮಿ ಪ್ರಸ್ತಾಪ ಮಂಡನೆಮಾಡಿದರು. ಭೋಜೇಗೌಡರು ಹಾಗೂ ಸಂಕನೂರು, ಹನುಮಂತ ನಿರಾಣಿ ಅವರು ಪೂಜಾರ್ ಹೆಸರು ಅನುಮೋದಿಸಿದರು. ಆದ್ರೆ ಚುನಾವಣೆಯಲ್ಲಿ ಅಂತಿಮವಾಗಿ ಸಲೀಂ ಅಹಮದ್ ಅವರನ್ನ ಆಯ್ಕೆ ಮಾಡಲಾಯಿತು.

ಸಂಪ್ರದಾಯದಂತೆ ವಿಪಕ್ಷ ನಾಯಕರು ಹಾಗೂ ಸಭಾ ನಾಯಕ ಸಲೀಂ ಅಹಮದ್ ಅವರನ್ನ ಸಭಾಪತಿ ಪೀಠದತ್ತ ಕರೆತಂದು ಕೂರಿಸಿದರು. ಸಭಾಪತಿ ಸ್ಥಾನಕ್ಕೆ ಆಯ್ಕೆ ಮಾಡಿದ್ದಕ್ಕೆ ಸಲೀಂ ಅಹ್ಮದ್ ಎಲ್ಲರಿಗೂ ಧನ್ಯವಾದ ಹೇಳಿದರು.

ಸಭಾಪತಿ ಸ್ಥಾನಕ್ಕೆ ಆಯ್ಕೆ ಮಾಡಿದ್ದಕ್ಕೆ ಸಲೀಂ ಅಹ್ಮದ್ ಎಲ್ಲರಿಗೂ ಧನ್ಯವಾದ ಹೇಳಿ ಸುದೀರ್ಘ ಭಾಷಣ ಮಾಡಿದರು. ನನ್ನನ್ನು ಸಭಾಪತಿ ಸ್ಥಾನಕ್ಕೆ ಅಭ್ಯರ್ಥಿಯನ್ನಾಗಿ ಮಾಡಿದಂತಹ ಂಖಅಅ ಅಧ್ಯಕ್ಷರು ಹಾಗೂ ರಾಜ್ಯಸಭಾ ವಿರೋಧ ಪಕ್ಷದ ನಾಯಕರಾಗಿರುವ ಮಲ್ಲಿಕಾರ್ಜುನ ಖರ್ಗೆಯವರಿಗೆ, ನಮ್ಮ ಅಧಿನಾಯಕಿ ಸೋನಿಯಾ ಗಾಂಧಿ, ನಮ್ಮ ನಾಯಕರು ಹಾಗೂ ಲೋಕಸಭಾ ವಿರೋಧ



ಪಕ್ಷದ ನಾಯಕ ರಾಹುಲ್ ಗಾಂಧಿಯವರಿಗೆ, AICC ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ. ವೇಣುಗೋಪಾಲ್ ಮತ್ತು ಸುರ್ಜೇವಾಲಾ ರವರಿಗೆ ಹಾಗೂ ಕರ್ನಾಟಕದ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ರವರಿಗೆ, ಮಾಜಿ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರಿಗೆ ಹಾಗೂ ಏಕಅಅ ಅಧ್ಯಕ್ಷರಾದ ಬಿ.ಕೆ. ಹರಿಪ್ರಸಾದ್ ಅವರಿಗೆ ಧನ್ಯವಾದಗಳನ್ನ ಅರ್ಪಿಸುತ್ತೇನೆ.

ಅದೇ ರೀತಿ ಮಾಜಿ ಕೇಂದ್ರ ಸಚಿವರಾದ ಜನಾರ್ದನ ಪೂಜಾರಿ ಅವರ ಮಾಜಿ ಮುಖ್ಯಮಂತ್ರಿಗಳಾದ ದಿವಂಗತ ವೀರೇಂದ್ರ ಪಾಟೀಲರು, ಹಾಗೂ ದಿವಂಗ ಆಸ್ಕರ್

2ನೇ ಪುಟಕ್ಕೆ..

## ಸ್ವಾತಂತ್ರ್ಯೋತ್ಸವಕ್ಕೂ ಮುನ್ನಾ ದಿನವೇ ದೆಹಲಿ ಹೈಕೋರ್ಟ್, ಏರ್‌ಪೋರ್ಟ್ ಸೇರಿ 5 ಸ್ಥಳಗಳಿಗೆ ಬಾಂಬ್ ಬೆದರಿಕೆ

ನವದೆಹಲಿ: ಸ್ವಾತಂತ್ರ್ಯ ದಿನಾಚರಣೆಗೆ ಒಂದು ದಿನ ಬಾಕಿಯಿರುವಾಗಲೇ ಶುಕ್ರವಾರ ದೆಹಲಿಯಲ್ಲಿ 5 ಪ್ರಮುಖ ಸ್ಥಳಗಳಿಗೆ ಬಾಂಬ್ ಬೆದರಿಕೆ ಬಂದಿದ್ದು, ರಾಷ್ಟ್ರ ರಾಜಧಾನಿಯಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದೆ.

ಜಾಮಾ ನಗರ್ ಹೌಸ್, ಝುಂಡೆವಾಲನ್ ಕಟ್ಟಡ, ಎಂಬಿ ಸಾಕೇತ್ ಕಚೇರಿ, ಡಿಎಂ ಕಚೇರಿ, ಐಜಿಐ ವಿಮಾನ ನಿಲ್ದಾಣದ ಟರ್ಮಿನಲ್ 3 ಮತ್ತು ದೆಹಲಿ ಕಂಟೋನ್ಮೆಂಟ್‌ನ ಎಸ್‌ಡಿಎಂ ಕಚೇರಿ ಸೇರಿದಂತೆ 5 ಸ್ಥಳಗಳಿಗೆ ಬಾಂಬ್ ಬೆದರಿಕೆ ಕರೆಗಳು ಬಂದಿವೆ.

'30 MB Blast at the Delhi High Court' ಎಂಬ ಸಂದೇಶದೊಂದಿಗೆ ಬಂದ ಇ-ಮೇಲ್‌ನಲ್ಲಿ ಮಧ್ಯಾಹ್ನ 2.11ಕ್ಕೆ ಸ್ಫೋಟ ಸಂಭವಿಸಲಿದೆ ಎಂದು ಉಲ್ಲೇಖಿಸಲಾಗಿತ್ತು. ಬೆದರಿಕೆ ಹಿನ್ನೆಲೆಯಲ್ಲಿ ಭದ್ರತಾ ಸಿಬ್ಬಂದಿ ತಕ್ಷಣ ಎಚ್ಚೆತ್ತುಕೊಂಡಿದ್ದಾರೆ. ಎಲ್ಲಾ ಸ್ಥಳಗಳಿಗೆ ಬಾಂಬ್ ನಿಷ್ಕ್ರಿಯ ದಳ ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿಯನ್ನ ಕಳುಹಿಸಿ ತೀವ್ರ ತಪಾಸಣೆ ನಡೆಸಲಾಗಿದೆ. ಆದ್ರೆ ಇಲ್ಲಿಯವರೆಗೆ

2ನೇ ಪುಟಕ್ಕೆ...



ಒಂದನೇ ಪುಟದಿಂದ..

# 224 ಶಾಸಕರೂ ನನಗೆ ಒಂದೇ,

## ನನ್ನ ಅಧಿಕಾರವನ್ನು ಯಾರ ವಿರುದ್ಧವೂ ಬಳಸುವುದಿಲ್ಲ: ಡಿಕೆಶಿ

ಕೊಡುಗೆ ನೀಡಿದ್ದಾರೆ. ನಾನು ಯಾರನ್ನು ಟೀಕೆ ಮಾಡುವುದಿಲ್ಲ ಎಂದು ಹೇಳಿದರು.

ಜೆಎಚ್ ಪಟೇಲರ ಹೃದಯ ಶ್ರೀಮಂತಿಕೆ ಬಹಳ ದೊಡ್ಡದು. ಬೇರೆಯವರ ಒತ್ತಡದಿಂದ ನನ್ನನ್ನು ಒಮ್ಮೆ ಬಂಧಿಸುವ ಸಂದರ್ಭ ಬಂದಾಗ, ನೀವು ಹೊರಗಡೆ ರಾಜಕೀಯ ಮಾಡಿಕೊಳ್ಳಿ, ನಿಮ್ಮ ರಾಜಕೀಯಕ್ಕೆ ಶಾಸಕನನ್ನು ಬಂಧಿಸುವುದಿಲ್ಲ ಎಂದು ಹೇಳಿದ್ದನ್ನು ಮುಖ್ಯಮಂತ್ರಿಗಳ ಸ್ಮರಿಸಿದರು.

ನಮ್ಮ ರಾಜಕಾರಣ ಏನೇ ಇದ್ದರು ರಸ್ತೆಯಲ್ಲಿರಲಿ. ನನಗೆ ಎಲ್ಲರೂ ಒಂದೇ. ಹಳೆಯದನ್ನೆಲ್ಲಾ ಮರೆತು, ಹೊಸ ಪಯಣದಲ್ಲಿ ಸಾಗೋಣ. ಇಡಿ ಪ್ರಪಂಚ ಭಾರತವನ್ನು ಬೆಂಗಳೂರು ಹಾಗೂ ಕರ್ನಾಟಕ ಮುಖೇನ ನೋಡುತ್ತಿದೆ. ನಮ್ಮಲ್ಲಿರುವ ಜ್ಞಾನ, ಪ್ರತಿಭೆ, ಮಾನವ ಸಂಪನ್ಮೂಲ, ಪ್ರಕೃತಿ ಸಂಪತ್ತು ಬೇರೆ ರಾಜ್ಯಗಳಲ್ಲಿ ಇಲ್ಲ ಎಂದರು.

ರಾಜಸ್ಥಾನ ಬಿಟ್ಟರೆ ಇದೇ ಎರಡನೇ ಅತಿದೊಡ್ಡ ಒಣ ಭೂಮಿ ರಾಜ್ಯ. ನಾವು ನೀರಿನ ವಿಚಾರದಲ್ಲಿ ಬೇರೆ ರಾಜ್ಯಗಳೊಂದಿಗೆ ಬಡಿದಾಡುತ್ತಿದ್ದೇವೆ. ಕೃಷಿಗೆ ಉತ್ತೇಜನ ನೀಡಲು ಅನೇಕ ನೀರಾವರಿ ಯೋಜನೆಗಳನ್ನು ನೀಡಿದ್ದು, ಮುಂದೆಯೂ ನೀಡುತ್ತೇವೆ. ಬೆಂಗಳೂರು ಸರ್ವಜನಾಂಗದ ಶಾಂತಿಯ ತೋಟ. ಇದು ಎಲ್ಲಾ ರೀತಿಯ ಜನರನ್ನು ಸ್ವಾಗತಿಸುತ್ತದೆ. ಇಲ್ಲಿ 2 ಲಕ್ಷ ವಿದೇಶಿ ಪಾಸ್ ಪೋರ್ಟ್ ದಾರರು, 500 ಪ್ರತಿಷ್ಠಿತ ಕಂಪನಿಗಳ ಪೈಕಿ 480 ಕಂಪನಿಗಳು, ಅದರ ಅಧಿಕಾರಿಗಳು ವಾಸಿಸುತ್ತಿದ್ದಾರೆ. ನಮ್ಮ ಕಾವೇರಿ ತಾಯಿ ಎಲ್ಲರಿಗೂ ನೀರು ನೀಡುತ್ತಿದ್ದಾಳೆ. ಬಂದವರಲ್ಲಿ ಎಲ್ಲರಿಗೂ ಉತ್ತಮ ಶಿಕ್ಷಣ, ಆರೋಗ್ಯ, ಪರಿಸರ ನೀಡುತ್ತಿದ್ದೇವೆ ಎಂದು ಹೇಳಿದರು.

ಬೆಂಗಳೂರು ಬೆಳವಣಿಗೆ ಕಾಣುತ್ತಿರುವಂತೆ ರಾಜ್ಯದ ಎರಡು ಹಾಗೂ ಮೂರನೇ ಹಂತದ ನಗರಗಳನ್ನು ಅಭಿವೃದ್ಧಿ ಪಡಿಸಬೇಕಾಗಿದೆ. ನಮ್ಮ ರಾಜ್ಯ ಪ್ರತಿ ವರ್ಷ 13,940 ವೈದ್ಯರನ್ನು ತಯಾರು ಮಾಡುತ್ತಿದೆ. ಇಲ್ಲಿನ ಅತ್ಯುತ್ತಮ ಇಂಜಿನಿಯರ್, ಡಾಕ್ಟರ್ ಗಳು ಹೊರಗಡೆ ಸೇವೆಸಲ್ಲಿಸುತ್ತಿದ್ದಾರೆ. ಕ್ಯಾಲಿಫೋರ್ನಿಯಾದಲ್ಲಿ 13ಲಕ್ಷ ಇಂಜಿನಿಯರ್ ಗಳಿದ್ದರೆ, ಬೆಂಗಳೂರಿನಲ್ಲಿ 26 ಲಕ್ಷ ಇಂಜಿನಿಯರ್ ಗಳಿದ್ದಾರೆ. ಇದಕ್ಕಾಗಿ ಉಪನಗರ ಅಭಿವೃದ್ಧಿ ಮಾಡಬೇಕು. ನಾವು ಹೊಸ ಯೋಜನೆ, ರಿಂಗ್ ರಸ್ತೆ ಮಾಡುತ್ತಿದ್ದೇವೆ. ದೇವೇಗೌಡರು ನೈಸ್ ರಸ್ತೆಗೆ ಸಹಿ ಹಾಕಿದರು. ಅವರು ಈ ವಿಚಾರದಲ್ಲಿ ಟೀಕೆ ಮಾಡಬಹುದು. ಆದರೆ ಆ ರಸ್ತೆನೇ ಇಲ್ಲವಾಗಿದ್ದರೆ ಬೆಂಗಳೂರು ಪರಿಸ್ಥಿತಿ ಏನಾಗುತ್ತಿತ್ತು. ಆ ಯೋಜನೆಯಲ್ಲಿ ಅನ್ಯಾಯ ಆಗಿದ್ದರೆ ಅದನ್ನು ಸರಿ ಮಾಡೋಣ. ಕುಮಾರಸ್ವಾಮಿ ಅವರು ಒಳ್ಳೆಯ ಉದ್ದೇಶ ಇಟ್ಟುಕೊಂಡು ಸಹಿ ಹಾಕಿದ್ದಾರೆ. ಯಡಿಯೂರಪ್ಪ ಅವರು ರೈತರಿಗಾಗಿ ಪ್ರತ್ಯೇಕ ಬಜೆಟ್ ಮಂಡಿಸಿ, ಅನ್ನದಾತರಿಗೆ ಕೊಡುಗೆ ನೀಡಿದ್ದಾರೆ ಎಂದು ಸ್ಮರಿಸಿದರು.

ಸಿದ್ದರಾಮಯ್ಯ ಅವರು ಹಸಿವಿನಿಂದ ಜನ ಕಂಗಾಲಾಗಬಾರದು ಎಂದು ಕೊಟ್ಟ ಅನ್ನಭಾಗ್ಯ ಯೋಜನೆ ಇತಿಹಾಸ ಪುಟದಲ್ಲಿ ರಾರಾಜಿಸುತ್ತದೆ. ಅರಸು ಅವರು ಕೊಟ್ಟ ಯೋಜನೆ, ಕೃಷ್ಣ ಅವರ ಕಾಲದಲ್ಲಿ ಆದ ಐಟಿ ಬಿಟಿ ಕ್ರಾಂತಿ ಎಲ್ಲವೂ ಇತಿಹಾಸ ಪುಟ ಸೇರಿದೆ. ನೆಹರೂ ಅವರ ಕಾಲದಿಂದ ಇಲ್ಲಿಯವರೆಗೂ ಎಲ್ಲ ನಾಯಕರು ಪಕ್ಷಾತೀತವಾಗಿ ತಮ್ಮದೇ ಆದ ದಾರಿಯಲ್ಲಿ ದೇಶದ ಪ್ರಗತಿಗೆ ಕೆಲಸ ಮಾಡಿದ್ದಾರೆ.

ಸಭಾಧ್ಯಕ್ಷರ ಪೀಠ ವೈಯಕ್ತಿಕ ಸ್ಥಾನವಲ್ಲ. ನಮ್ಮ ಪಕ್ಷದ ನಾಯಕರು ಈ ಸ್ಥಾನಕ್ಕೆ ಅಭ್ಯರ್ಥಿಗಳನ್ನು ಸೂಚಿಸಿದ್ದಾರೆ ಹೊರತು ಅವರನ್ನೇ ಸಭಾಧ್ಯಕ್ಷರನ್ನಾಗಿ ಘೋಷಣೆ ಮಾಡಿಲ್ಲ. ಇದಕ್ಕೆ ವಿರೋಧ ಪಕ್ಷದ ನಾಯಕರು ಪ್ರತಿಭಟನೆ ಮಾಡುತ್ತಿದ್ದಾರೆ. ಸ್ಪೀಕರ್ ಆದವರು ಪಕ್ಷಾತೀತರು. ಎಲ್ಲರ ಮಾತಿಗೂ ಕಿವಿಗೊಡಬೇಕು. ಹೀಗಾಗಿ ವಿರೋಧ ಪಕ್ಷದವರು ವಿರೋಧ ಮಾಡುವುದನ್ನು ಬಿಟ್ಟು ಸಭಾಧ್ಯಕ್ಷರ ಆಯ್ಕೆಯಲ್ಲಿ ಭಾಗವಹಿಸಬೇಕಿತ್ತು. ವಿರೋಧ ಮಾಡುವುದು ಅವರ ಘನತೆಗೆ ತಕ್ಕದಲ್ಲ" ಎಂದು ಅಭಿಪ್ರಾಯಪಟ್ಟರು. ಮುಂದಿನ 25 ವರ್ಷಗಳಲ್ಲಿ ರಾಜ್ಯವನ್ನು ಹಸಿರು ರಾಜ್ಯವನ್ನಾಗಿ ಮಾಡಿ, ನೀರಿನ ಪೋಲು ತಡೆಗಟ್ಟಿ ಕೃಷಿಗೆ ಬಳಸಬೇಕು. ಪ್ರತಿಯೊಬ್ಬ ರೈತರ ಬದುಕಿಗೆ ಆಸರೆಯಾಗಬೇಕು. ತೋಟಗಾರಿಕೆ, ಹೈನುಗಾರಿಕೆ ಪರ್ಯಾಯ ರೈತರ ಆರ್ಥಿಕತೆಯಾಗಿದೆ. ನಮ್ಮ ಸರ್ಕಾರ ಗ್ರಾಮೀಣ ಭಾಗದ ಜನರು, ಮಕ್ಕಳು ಶಿಕ್ಷಣ–ಕ್ಕಾಗಿ ನಗರಕ್ಕೆ ವಲಸೆ ಬರುವುದನ್ನು ತಪ್ಪಿಸಲು ನಿಧಿಯನ್ನು ಗ್ರಾಮೀಣ ಭಾಗದ ಪ್ರಾಥಮಿಕ ಶಿಕ್ಷಣಕ್ಕೆ ಮೀಸಲಿಡಲು ತೀರ್ಮಾನಿಸಿದ್ದೇವೆ. ಬೆಂಗಳೂರಿನಲ್ಲಿ 10 ಲಕ್ಷಕ್ಕೆ ಒಬ್ಬ ಪೊಲೀಸ್ ಕಮಿಷನರ್ ಮಾಡಿದ್ದರು. ಆದರೆ ಇಂದು 1.50 ಕೋಟಿ ಜನರಾಗಿದ್ದಾರೆ. ನಮ್ಮ ಪೊಲೀಸ್ ಇಲಾಖೆ ದಕ್ಷತೆಯಿಂದ ಕೆಲಸ ಮಾಡುತ್ತಿದೆ. ರಾತ್ರಿ 2 ಗಂಟೆಯಲ್ಲಿ ಹೆಣ್ಣುಮಕ್ಕಳು ನಿರ್ಭೀತವಾಗಿ ಹೊರಗೆ ಓಡಾಡಿದರೂ ರಕ್ಷಣೆ ನೀಡುತ್ತಿದೆ. ರಾಜ್ಯವನ್ನು ಡ್ರಗ್ಸ್ ಮುಕ್ತಗೊಳಿಸಲು ಕ್ರಮ ವಹಿಸಿದ್ದೇವೆ. ಕೃಷ್ಣ ಬೈರೇಗೌಡರು ಕಂದಾಯ ಇಲಾಖೆಯಲ್ಲಿ ಕೈಗೊಂಡ ಕ್ರಾಂತಿಕಾರಿ ತೀರ್ಮಾನ ದೇಶಕ್ಕೆ ಮಾದರಿಯಾಗಿದೆ. ಇ ಖಾತೆ, ಬಿ ಟು ಎ ಖಾತಾ ಎಲ್ಲವನ್ನು ನೀಡುತ್ತಿದ್ದೇವೆ. ಗ್ಯಾರಂಟಿ ನೀಡಿದ್ದೇವೆ. ನಮ್ಮ ಸರ್ಕಾರ ಇರುವುದೇ ಜನರಿಗಾಗಿ. ಸರ್ಕಾರಿ ನೌಕರರು ಗ್ಯಾರಂಟಿ ಯೋಜನೆ ತ್ಯಜಿಸಲು ಮುಂದಾಗಿದ್ದು, ಅವರಿಗೆ ಸರ್ಕಾರದ ಪರವಾಗಿ ಅಭಿನಂದನೆ ಸಲ್ಲಿಸುತ್ತೇವೆ" ಎಂದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ನಾವು ವಿರೋಧ ಪಕ್ಷದ ನಾಯಕರನ್ನು ಬಿಟ್ಟು ಕೆಲಸ ಮಾಡಲು ಆಗುವುದಿಲ್ಲ. ನಮಗೆ ಯಾರ ಬಗ್ಗೆಯೂ ಹೊಟ್ಟೆಉರಿ ಇಲ್ಲ. ಯಾರ ವಿರುದ್ಧವೂ ಈ ಅಧಿಕಾರ ದುರುಪಯೋಗ ಮಾಡಿ ತೊಂದರೆ ನೀಡಲು ನಾನು ಬಯಸುವುದಿಲ್ಲ. ಅಧಿಕಾರದ ವಿಚಾರವಾಗಿ ಅಶೋಕ್ ಅವರು ಇದೇ ಸದನದಲ್ಲಿ ಮಾತನಾಡಿದಾಗ, ನಾನು ಒಂದು ಮಾತು ಹೇಳಿದ್ದೆ. ಧೈರ್ಯಶಾಲಿ ಒಬ್ಬ ವ್ಯಕ್ತಿಯಿಂದ ಬಹುಮತ ಸಾಧ್ಯವಾಗುತ್ತದೆ. ಸಿದ್ದರಾಮಯ್ಯ ಅವರು ಸೇರಿದಂತೆ ನಾವು 136 ಜನ ಒಂದೇ ಎಂದು ಅಂತ ಹೇಳಿದ್ದೆ. ನಾನು ಅದನ್ನು ಸಾಬೀತುಪಡಿಸಿದ್ದೇನೆ. ನಾವು ಒಟ್ಟಾಗಿ ಹೋರಾಟ ಮಾಡುತ್ತೇವೆ. ಅಂತಿಮ ಫಲಿತಾಂಶವನ್ನು ಜನ ತೀರ್ಮಾನಿಸುತ್ತಾರೆ ಎಂದು ತಿಳಿಸಿದರು. 2028ರ ಚುನಾವಣೆ ಹೇಗೆ ಎದುರಿಸಬೇಕು ನನಗೆ ಗೊತ್ತಿದೆ. ನಾನು ಫುಟ್ಬಾಲ್ ಆಡುವವನಲ್ಲ, ಚೆಸ್ ಆಡುವವನು. ಜನರ ಸೇವೆ ಮಾಡುವಾಗ ಎಲ್ಲರೂ ಒಂದಾಗಿ ಕೆಲಸ ಮಾಡಬೇಕು. ಇಲ್ಲಿ ಯಾರೂ ಶಾಶ್ವತವಲ್ಲ. ನಾವು ವಿರೋಧ ಪಕ್ಷಕ್ಕೆ ಹೋಗಬಹುದು, ವಿರೋಧ ಪಕ್ಷದವರು ಇಲ್ಲಿಗೆ ಬರಬಹುದು. ಜನರು ನಮ್ಮೆಲ್ಲರನ್ನು ಆಯ್ಕೆ ಮಾಡಿರುವುದು ರಾಜ್ಯದ ಹಿತ ಕಾಪಾಡಲು. ಸಭಾಧ್ಯಕ್ಷರ, ಸ್ಥಾನದಲ್ಲಿ ಕುಳಿತಿರುವ ಟಿ ಬಿ ಜಯಚಂದ್ರ ಅವರು ಹಿರಿಯರು. ಆ ಸ್ಥಾನದ ಮಹಿಮೆ ದೊಡ್ಡದು. ಅದನ್ನು ಅಲಂಕರಿಸಿದ ಕೃಷ್ಣ ಅವರು ಸಿಎಂ ಆದರು, ಅಲ್ಲಿ ಕುಳಿತಿದ್ದ ಜಗದೀಶ್ ಶೆಟ್ಟರ್ ಅವರು ಸಿಎಂ ಆದರು. ಖಾದರ್ ಅವರು ಅಲ್ಲಿ ಕೂತು ಈಗ ಡಬಲ್ ಇಲಾಖೆ ಧಮಾಕದೊಂದಿಗೆ ಇಲ್ಲಿ ಕೂತಿದ್ದಾರೆ. ಎಲ್ಲರೂ ಭರವಸೆಯಿಂದ ಇರೋಣ ಎಂದರು. ಈ ಸದನಕ್ಕೆ ನಮ್ಮ ಸಚಿವರನ್ನು ವಿರೋಧ ಪಕ್ಷದವರಿಗೆ ಪರಿಚಯಿಸಬೇಕು ಎಂಬುದು ನಮ್ಮ ಆಸೆ. ಆದರೆ ಅವರು ಇಲ್ಲಿ ಇಲ್ಲ. ಟಿವಿ ಮೂಲಕ ಇದನ್ನು ನೋಡುತ್ತಿರಬಹುದು ಎಂದು ತಮ್ಮ ಸಚಿವರನ್ನು ಸದನಕ್ಕೆ ಪರಿಚಯಿಸಿದರು.

ನಾವು ಇಷ್ಟೂ ಜನ ಯಾರ ಮೇಲೂ ದ್ವೇಷ ಮಾಡದೇ, ರಾಜ್ಯದ ಹಿತಕ್ಕಾಗಿ ಕೆಲಸ ಮಾಡುತ್ತೇವೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗ, ಪತ್ರಿಕಾರಂಗ ಒಂದಾಗಿ ಕೆಲಸ ಮಾಡಬೇಕು. ಕೇಂದ್ರ ಸರ್ಕಾರದ ಸಚಿವರನ್ನು ನಾವು ವಿಶ್ವಾಸಕ್ಕೆ ತೆಗೆದುಕೊಂಡು ಕೆಲಸ ಮಾಡಲು ಬಯಸುತ್ತೇವೆ. ನೀರಾವರಿ ವಿಚಾರದಲ್ಲಿ ಪ್ರಹ್ಲಾದ್ ಜೋಷಿ ಅವರು ನಮಗೆ ಕೊಟ್ಟ ಸಹಕಾರವನ್ನು ನಾವು ಅಭಿನಂದಿಸುತ್ತೇವೆ. ಇನ್ನು ಕುಮಾರಸ್ವಾಮಿ ಅವರು ಕೇಂದ್ರ ಸರ್ಕಾರದಲ್ಲಿ ಅತಿ ದೊಡ್ಡ ಖಾತೆಯನ್ನು ಹೊಂದಿದ್ದಾರೆ. ಅವರು ರಾಜ್ಯದ ಜನರಿಗೆ 25 ಸಾವಿರ ಉದ್ಯೋಗ ಕಲ್ಪಿಸಬಹುದು. ಅವರು ಎಲ್ಲಿ ಜಾಗ ಕೇಳುತ್ತಾರೋ ಅಲ್ಲಿ ಕೊಡೋಣ. ಎಷ್ಟೇ ಆದರೂ ನಮ್ಮ ನಾಡಿನ ಜನರಿಗೆ ಉದ್ಯೋಗ ಕಲ್ಪಿಸುವುದು ಮುಖ್ಯ ಅಲ್ಲವೇ? ಅವರು ನನ್ನ ಬಗ್ಗೆ ಎಷ್ಟೇ ಬೇಸರ ಹೊಂದಿದ್ದರೂ ಅವರ ಜೊತೆಗೆ ಕೆಲಸ ಮಾಡಲು ನಾನು ಸಿದ್ಧ ಎಂದು ತಿಳಿಸಿದರು.

ಅಧಿಕಾರದಲ್ಲಿ ನಾವು ಎರಡನ್ನು ಸಂಪಾದಿಸಬಹುದು. ಒಂದು ಅತಿ ಹೆಚ್ಚು ಮಿತ್ರರು ಅಥವಾ ಅತಿ ಹೆಚ್ಚು ಶತ್ರುಗಳು. ನಾನು ಹೆಚ್ಚು ಸ್ನೇಹಿತರನ್ನು ಗಳಿಸಲು ಬಯಸುತ್ತೇನೆ. ಎಲ್ಲರಿಗೂ ನೆರವು ನೀಡಲು ಬಯಸುತ್ತೇನೆ. ಎಲ್ಲರನ್ನು ಒಟ್ಟಾಗಿ ತೆಗೆದುಕೊಂಡು ಹೋಗುವೆ. ನನ್ನ 40 ವರ್ಷಗಳ ರಾಜಕೀಯದಲ್ಲಿ ಏಳು ಬೀಳುಗಳನ್ನು ಕಂಡಿದ್ದು, ನನ್ನದೇ ಆದ ಅನುಭವದಲ್ಲಿ ಹೊಸ ಆಲೋಚನೆಗಳನ್ನು ಹೊಂದಿದ್ದೇನೆ. ನನ್ನ ಈ ಸ್ಥಾನ ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಅನುಕೂಲವಾಗುವಂತಾಗಬೇಕು. ಸಿದ್ದರಾಮಯ್ಯ ಅವರು 8 ವರ್ಷಗಳ ಕಾಲ ಕೊಟ್ಟ ಭಾಗ್ಯಗಳನ್ನು ನಾವು ಮುಂದುವರಿಸಿಕೊಂಡು ಹೋಗುತ್ತೇನೆ ಎಂದು ಹೇಳಿದರು. ವಿಧಾನಸಭೆ ಸಭಾಧ್ಯಕ್ಷರಾಗಿ ಜಿ ಎಸ್ ಪಾಟೀಲ್ ಅವರ ಆಯ್ಕೆ ಬಳಿಕ ಮಾತನಾಡಿದ ಮುಖ್ಯಮಂತ್ರಿಗಳು, "ಮೊದಲಿಗೆ ಟಿ ಬಿ ಜಯಚಂದ್ರ ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ. ಅವರು 1978ರಿಂದ ಶಾಸಕರಾಗಿದ್ದು, ಹಂಗಾಮಿ ಸಭಾಧ್ಯಕ್ಷರಾಗಿ ನಿಮ್ಮ ಆಯ್ಕೆಗೆ ನೆರವಾಗಿದ್ದಾರೆ. ಇನ್ನು ಖಾದರ್ ಅವರು ಮೂರು ವರ್ಷಗಳ ಅವಧಿಯಲ್ಲಿ ವಿಧಾನಸಭೆಗೆ ಹೊಸ ರೂಪ ನೀಡಲು ಪ್ರಯತ್ನಿಸಿದ್ದಾರೆ. ಮಧ್ಯರಾತ್ರಿವರೆಗೂ ಸದನ ನಡೆಸಿ ತಮ್ಮದೇ ಛಾಪು ಮೂಡಿಸಿದ್ದಾರೆ. ಅವರಿಗೆ ನಮ್ಮೆಲ್ಲರ ಪರವಾಗಿ ಅಭಿನಂದಿಸುವೆ" ಎಂದು ಹೇಳಿದರು.

"ಸಭಾಧ್ಯಕ್ಷರೇ ನೀವು ಬಹಳ ವರ್ಷಗಳಿಂದ ನಮ್ಮ ಜೊತೆ ರಾಜಕಾರಣದಲ್ಲಿದ್ದೀರಿ. ನಿಮ್ಮ ಕುಟುಂಬವನ್ನು ನಾನು ಬಲ್ಲೆ, ನಿಮ್ಮದು ಬಹುದೊಡ್ಡ ಕೃಷಿ ಕುಟುಂಬ. ನಿಮ್ಮ ಸಹೋದರ ಆರ್ ಎಸ್ ಪಾಟೀಲ್ ಅವರು ಅಧ್ಯಕ್ಷರಾಗಿ, ಲೋಕಸಭೆ ಸದಸ್ಯರಾಗಿ ಕೆಲಸ ಮಾಡಿದ್ದಾರೆ. ಮತ್ತೊಬ್ಬ ಸಹೋದರರು ಸಹಕಾರ ಕ್ಷೇತ್ರದಲ್ಲಿದ್ದಾರೆ. ಇನ್ನೊಬ್ಬ ಸಹೋದರರು ಆರೋಗ್ಯ ಇಲಾಖೆಯಲ್ಲಿ ಸೇವೆ ಮಾಡಿದ್ದಾರೆ. ಬಿ.ಎಸ್ ಪಾಟೀಲ್ ಅವರು ರಾಜ್ಯದ ಮುಖ್ಯ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದಾರೆ. ನಿಮ್ಮ ಕಿರಿಯ ಸಹೋದರ ಡಿಸಿಸಿ ಬ್ಯಾಂಕ್ ಅಧ್ಯಕ್ಷರಾಗಿದ್ದಾರೆ. ನಿಮ್ಮ ಇಡೀ ಕುಟುಂಬ ಹೀಗೆ ಸಮಾಜಕ್ಕೆ ಸೇವೆ ಸಲ್ಲಿಸಿದೆ. ನಮ್ಮ ಪಕ್ಷ ನಿಮ್ಮನ್ನು ಸ್ಪೀಕರ್ ಸ್ಥಾನದಲ್ಲಿ ಕೂರಿಸಲಿಲ್ಲ, ಕೇವಲ ಅಭ್ಯರ್ಥಿಯನ್ನಾಗಿ ಘೋಷಿಸಿತು. ಆ ಸ್ಥಾನಕ್ಕೆ ಅಗೌರವ ನೀಡುವುದು ನಮ್ಮ ಚಿಂತನೆಯಲ್ಲ. ವಿರೋಧ ಪಕ್ಷದವರು ಅವರದೇ ಆದ ರೀತಿಯಲ್ಲಿ ತಗಾದೆ ಹುಡುಕಿದ್ದಾರೆ. ವಿರೋಧ ಪಕ್ಷದವರು ನಿಮ್ಮ ಆಯ್ಕೆ ವೇಳೆ ಬರದೇ ಇರುವುದು ಅವರ ರಾಜಕೀಯ ನಿಲುವು. ಆದರೂ ಈ ಮೂಲಕ ನಿಮ್ಮ ಆಯ್ಕೆಗೆ ಸಹಕರಿಸಿದ್ದಾರೆ. ಅವರ ಪರವಾಗಿಯೂ ನಿಮಗೆ ಅಭಿನಂದನೆ ಸಲ್ಲಿಸುವೆ" ಎಂದು ತಿಳಿಸಿದರು.

"1989ರಿಂದ 8 ಬಾರಿ ನೀವು ಸ್ಪರ್ಧೆ ಮಾಡಿದ್ದೀರಿ. ಉಗ್ರಾಣ ನಿಗಮದ ಅಧ್ಯಕ್ಷರಾಗಿ, ಇಂಧನ ಅಭಿವೃದ್ಧಿ, ಖನಿಜ ನಿಗಮದಲ್ಲಿ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದೀರಿ. ನಿಮ್ಮ ಹಾಗೂ ಹೆಚ್ ಕೆ ಪಾಟೀಲ್ ಅವರ ಕ್ಷೇತ್ರದ ಭೇಟಿಯ ಸಂದರ್ಭದಲ್ಲಿ, ಅಲ್ಲಿದ್ದ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಗಮನಿಸಿದೆ. ನಿಜಕ್ಕೂ ಮಾದರಿಯಾಗಿದೆ. ನಾನು ನಮ್ಮ ಕಾರ್ಯಕರ್ತರನ್ನು ಕಳುಹಿಸಿ ವೀಕ್ಷಣೆ ಮಾಡಿಸಿ, ನಮ್ಮ ಕ್ಷೇತ್ರಗಳಲ್ಲೂ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಲಾಯಿತು. ಪಾಟೀಲ್ ಅವರು ರಾಜೀವ್ ಗಾಂಧಿ ಅವರ ಹೆಸರಿನಲ್ಲಿ ಶಿಕ್ಷಣ ಸಂಸ್ಥೆ ಹೊಂದಿದ್ದಾರೆ. ವೀರಶೈವ ಸಮಾಜದ ವಿಚಾರದಲ್ಲಿ ನಮ್ಮಲ್ಲಿ ಕೆಲವು ಭಿನ್ನಾಭಿಪ್ರಾಯ ಬಂದಾಗ, ನಾನು ಅವರ ಕ್ಷೇತ್ರಕ್ಕೆ ಹೋಗಿ ರಂಭಾಪುರಿ ಶ್ರೀಗಳ ಬಳಿ ಕ್ಷಮೆ ಕೋರಿದ್ದೇನೆ. ಈ ವಿಚಾರಕ್ಕೆ ಸಾಕಷ್ಟು ಟೀಕೆಗಳನ್ನು ಎದುರಿಸಿದೆ. ಪುಟ್ಟರಾಜ ಗವಾಯಿ ಅವರ ಅಂಧರ ಶಿಕ್ಷಣ ಸಂಸ್ಥೆಯಲ್ಲಿ ಕೆಲಸ ಮಾಡುತ್ತಿದ್ದಾರೆ. ಇವರ ಕುಟುಂಬ ಶಿಸ್ತಿನ ಬದುಕಿನ ಕುಟುಂಬ. ನಿಮಗೆ ಭಗವಂತ ಒಳ್ಳೆಯದು ಮಾಡಲಿ. ನೀವು ಆ ಸ್ಥಾನದಲ್ಲಿ ಕುಳಿತು ನ್ಯಾಯವನ್ನು ನೀಡಿ. ನೀವು ಕೇವಲ ನಮ್ಮನ್ನು ಮಾತ್ರವಲ್ಲ, ವಿರೋಧ ಪಕ್ಷದವರ ಧ್ವನಿ ಆಲಿಸಿ. ನೀವು ಎತ್ತರದ ಸ್ಥಾನದಲ್ಲಿದ್ದು ಇನ್ನಷ್ಟು ಎತ್ತರಕ್ಕೆ ಬೆಳೆಯಿರಿ ಎಂದು 224 ಶಾಸಕರ ಪರವಾಗಿ ಶುಭ ಹಾರೈಸುತ್ತೇನೆ" ಎಂದು ತಿಳಿಸಿದರು.

# ದೇಶದ್ರೋಹಿ ಅನ್ನೋದಕ್ಕೆ ಇದಕ್ಕಿಂತೆ ಸಾಕ್ಷಿ ಬೇಕಾ?

ಸಚಿವ ಜಮೀರ್ ಮತ್ತು ಈ ಕಾಂಗ್ರೆಸ್ ಸರ್ಕಾರಕ್ಕೆ ರಾಷ್ಟ್ರದ ಹೆಮ್ಮೆ, ನಮ್ಮ ಕ್ರಾಂತಿಕಾರಿಗಳ ಬಲಿದಾನ ಮತ್ತು ಪವಿತ್ರ ತ್ರಿವರ್ಣ ಧ್ವಜಕ್ಕಿಂತ ಅಧಿಕಾರದ ದಾಹ ಹಾಗೂ ಚುನಾವಣಾ ಲೆಕ್ಕಾಚಾರಗಳೇ ಮೊದಲ ಆದ್ಯತೆಯಾಗಿದೆ" ಎಂದಿದ್ದಾರೆ.

"ಈ ಅಹಂಕಾರ ಮತ್ತು ರಾಷ್ಟ್ರವಿರೋಧಿ ಮನಸ್ಥಿತಿ ಕಾಂಗ್ರೆಸ್ ಸಂಸ್ಕೃತಿಯಲ್ಲೇ ರಕ್ತಗತವಾಗಿದೆ. ರಾಹುಲ್ ಗಾಂಧಿ ಅವರ ನೇತೃತ್ವದಲ್ಲಿ ಇಂತಹ ದೇಶದ್ರೋಹಿ ಧೋರಣೆಗೆ ಕಾಂಗ್ರೆಸ್ ಪಕ್ಷದಲ್ಲಿ ಬೆಂಬಲ ಸಿಗುತ್ತಿದೆ. ದೇಶದ ಸ್ವಾತಂತ್ರ್ಯೋತ್ಸವಕ್ಕಿಂತ ಚುನಾವಣಾ ತಂತ್ರವೇ ಮುಖ್ಯ ಎನ್ನುವ ನಾಯಕರಿಗೆ ಈ ಮಣ್ಣಿನ ಮೇಲಿರುವ ನಿಷ್ಠೆ ಎಂಥದ್ದು ಎಂಬುದು ಈಗ ಪ್ರತಿಯೊಬ್ಬ ಕನ್ನಡಿಗನಿಗೂ ಅರ್ಥವಾಗಿದೆ" ಎಂದು ಟೀಕಿಸಿದ್ದಾರೆ.

ಇನ್ನು ಜಮೀರ್ ಅಹಮ್ಮದ ಖಾನ್ ಅವರ ಪತ್ರ ಬರೆದಿರುವುದನ್ನು ಬಿಜೆಪಿ ಶಾಸಕ ಸುನಿಲ್ ಕುಮಾರ್ ಸಹ ಸದನಲ್ಲಿಂದು ಪ್ರಸ್ತಾಪಿಸಿ ಸರ್ಕಾರದ ವಿರುದ್ಧ ಮುಗಿಬಿದ್ದರು. ರಾಷ್ಟ್ರಧ್ವಜ ಹಾರಿಸಲು ಸಮಯ ಇಲ್ಲದ ಸಚಿವರು ಏಕೆ ಬೇಕು? ಎಂದು ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು. ಈ ವೇಳೆ ಡಿಸಿಎಂ ಪರಮೇಶ್ವರ್, ಸಮರ್ಥನೆ ಮಾಡಿಕೊಳ್ಳಲು ಮುಂದಾದರು. ಇದಕ್ಕೆ ಡಾ ಅಶ್ವತ್ಥ್ ನಾರಾಯಣ ಸಹ ಎದ್ದು ನಿಂತು ಭಾರತೀಯನಾಗಿರುವವನು ಈ ರೀತಿ ನಡೆದುಕೊಳ್ಳಲು ಸಾಧ್ಯವಿಲ್ಲ ಎಂದು ಕಿಡಿಕಾರಿದರು.

# ಮಾನನಷ್ಟ ಕೇಸ್ ರದ್ದು, ರಾಹುಲ್‌ಗೆ ಬಿಗ್ ರಿಲೀಫ್

ಕಾನೂನುಬದ್ಧ ಅನುಮತಿಯ ಕೊರತೆಯನ್ನು ಎತ್ತಿಹಿಡಿದಿದೆ.

ಇಂತಹ ಪ್ರಕರಣಗಳಲ್ಲಿ ಕಾನೂನಿನ ಅಡಿಯಲ್ಲಿ ಪ್ರಾಸಿಕ್ಯೂಷನ್‌ಗೆ ಸರ್ಕಾರದ ಪೂರ್ವಾನುಮತಿ ಅಗತ್ಯವಿರುತ್ತದೆ. ಆದರೆ ಉತ್ತರ ಪ್ರದೇಶ ಸರ್ಕಾರದಿಂದ ಯಾವುದೇ ಅನುಮತಿ ಸಿಕ್ಕಿಲ್ಲ. ಅನುಮತಿ ಇಲ್ಲ ಎಂದಮೇಲೆ ಪ್ರಕರಣ ಅಲ್ಲಿಗೇ ಮುಕ್ತಾಯವಾಗುತ್ತದೆ. ನೀವು ಕಾನೂನನ್ನು ಪಾಲಿಸಲೇಬೇಕು ಎಂದು ನ್ಯಾಯಮೂರ್ತಿ ದತ್ತಾ ರಾಜ್ಯ ಸರ್ಕಾರ ಮತ್ತು ದೂರುದಾರರಿಗೆ ಸ್ಪಷ್ಟಪಡಿಸಿದರು. ಲಕ್ನೋ ಮ್ಯಾಜಿಸ್ಟ್ರೇಟ್ ಹೊರಡಿಸಿದ್ದ ಸಮನ್ಸ್ ಹಾಗೂ ಪಾಂಡೆ ದಾಖಲಿಸಿದ್ದ ದೂರು ಎರಡನ್ನೂ ಸುಪ್ರೀಂ ಕೋರ್ಟ್ ಸಂಪೂರ್ಣವಾಗಿ ರದ್ದುಗೊಳಿಸಿತು. ಮ್ಯಾಜಿಸ್ಟ್ರೇಟ್ ಕೋರ್ಟ್ ಜಾರಿ ಮಾಡಿದ್ದ ಸಮನ್ಸ್ ಅನ್ನು ರದ್ದುಗೊಳಿಸಲು ಅಲಹಾಬಾದ್ ಹೈಕೋರ್ಟ್ ನಿರಾಕರಿಸಿತ್ತು. ಈ ಆದೇಶವನ್ನು ಪ್ರಶ್ನಿಸಿ ರಾಹುಲ್ ಗಾಂಧಿ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು.

# ಡಿಕೆಶಿ ಮಹಿಳಾ ಸಚಿವರಿಲ್ಲ: ವಿಧಾನಸೌಧ ಆವರಣದಲ್ಲಿ ಬಿಜೆಪಿ ಶಾಸಕರ ಪ್ರತಿಭಟನೆ

ವಿರೋಧಿ" ಎಂದು ಟೀಕಿಸಿದ ಬಿಜೆಪಿ ಶಾಸಕರು, ರಾಜ್ಯ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.

ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಪ್ರತಿಭಟನೆಯ ನೇತೃತ್ವ ವಹಿಸಿದ್ದರು. ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್. ಅಶೋಕ, ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಚಲವಾದಿ ನಾರಾಯಣಸ್ವಾಮಿ ಸೇರಿದಂತೆ ಮಹಿಳಾ ಶಾಸಕರೂ ಒಳಗೊಂಡಂತೆ ಹಲವು ಬಿಜೆಪಿ ಶಾಸಕರು ಪ್ರತಿಭಟನೆಯಲ್ಲಿ ಪಾಲ್ಗೊಂಡರು. ವಿಧಾನಸೌಧದ ಆವರಣದ ಪ್ರವೇಶದ್ವಾರದ ಬಳಿಯಿರುವ ನಾಡದೇವಿ ಭುವನೇಶ್ವರಿ ಪ್ರತಿಮೆ ಸಮೀಪ ಬಿಜೆಪಿ ಶಾಸಕರು ಜಮಾಯಿಸಿ, ಬಳಿಕ ವಿಧಾನಸೌಧದತ್ತ ಮೆರವಣಿಗೆ ನಡೆಸಿದರು.ಮೇ 28ರಂದು ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ ಬಳಿಕ, ಜೂನ್ 3ರಂದು ಡಿ.ಕೆ. ಶಿವಕುಮಾರ್ ಅವರು 13 ಸಚಿವರೊಂದಿಗೆ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ್ದರು. ಅಧಿಕಾರ ವಹಿಸಿಕೊಂಡ ಎರಡು ತಿಂಗಳ ಬಳಿಕ, ಆಗಸ್ಟ್ 3ರಂದು ಶಿವಕುಮಾರ್ ಅವರು 19 ಸಚಿವರನ್ನು ಸಂಪುಟಕ್ಕೆ ಸೇರ್ಪಡೆಗೊಳಿಸುವ ಮೂಲಕ ಸಚಿವ ಸಂಪುಟವನ್ನು ವಿಸ್ತರಿಸಿದರು. ಇದರಿಂದ ಮುಖ್ಯಮಂತ್ರಿ ಸೇರಿದಂತೆ ಸಂಪುಟದ ಒಟ್ಟು ಸದಸ್ಯರ ಸಂಖ್ಯೆ 33ಕ್ಕೆ ಏರಿಕೆಯಾಯಿತು.

ಪ್ರಸ್ತುತ ಡಿ ಕೆ ಶಿವಕುಮಾರ್ ನೇತೃತ್ವದ ಸಚಿವ ಸಂಪುಟದಲ್ಲಿ ಯಾವುದೇ ಮಹಿಳಾ ಸಚಿವರಿಲ್ಲ. ಇತ್ತೀಚೆಗೆ ಸಂಪುಟಕ್ಕೆ ಸೇರ್ಪಡೆಯಾದ ಸಚಿವರ ಪೈಕಿ ಟಿ. ರಘುಮೂರ್ತಿ ಅವರಿಗೆ ಪರಿಶಿಷ್ಟ ಪಂಗಡಗಳ ಕಲ್ಯಾಣ ಖಾತೆ, ಅಜಯ್ ಸಿಂಗ್ ಅವರಿಗೆ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಶಿವಲಿಂಗೇಗೌಡ ಅವರಿಗೆ ಅಬಕಾರಿ, ವಿಜಯಾನಂದ ಕಾಶಪ್ಪನವರ್ ಅವರಿಗೆ ಸಣ್ಣ ಕೈಗಾರಿಕೆಗಳು ಮತ್ತು ಸಾರ್ವಜನಿಕ ಉದ್ದಿಮೆಗಳು, ಕೆ.ಎಸ್. ಬಸವಂತಪ್ಪ ಅವರಿಗೆ ಮುಜರಾಯಿ, ಮೀನುಗಾರಿಕೆ, ಬಂದರು ಹಾಗೂ ಒಳನಾಡು ಜಲಸಾರಿಗೆ, ರಿಜ್ವಾನ್ ಅರ್ಷದ್ ಅವರಿಗೆ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳು ಮತ್ತು ಎಚ್.ಸಿ. ಬಾಲಕೃಷ್ಣ ಅವರಿಗೆ ನಗರಾಡಳಿತ ಖಾತೆಗಳನ್ನು ನೀಡಲಾಗಿದೆ. ಇತರ ಸಚಿವರ ಪೈಕಿ ಲಕ್ಷ್ಮಣ ಸವದಿ ಅವರಿಗೆ ಸಹಕಾರ, ಬಸವರಾಜ ರಾಯರೆಡ್ಡಿ ಅವರಿಗೆ ಉನ್ನತ ಶಿಕ್ಷಣ, ಪುಟ್ಟರಂಗ ಶೆಟ್ಟಿ ಅವರಿಗೆ ಪಶುಸಂಗೋಪನೆ ಮತ್ತು ರೇಷ್ಮೆ ಹಾಗೂ ನರೇಂದ್ರ ಸ್ವಾಮಿ ಅವರಿಗೆ ಕೃಷಿ ಖಾತೆಗಳನ್ನು ವಹಿಸಲಾಗಿದೆ.

# ದೆಹಲಿ ಹೈಕೋರ್ಟ್, ಏರ್‌ಪೋರ್ಟ್ ಸೇರಿ 5 ಸ್ಥಳಗಳಿಗೆ ಬಾಂಬ್ ಬೆದರಿಕೆ

ಯಾವುದೇ ಅನುಮಾನಾಸ್ಪದ ವಸ್ತುಗಳು ಕಂಡುಬಂದಿಲ್ಲ ಎಂದು ದೆಹಲಿ ಅಗ್ನಿಶಾಮಕ ಸಿಬ್ಬಂದಿ ತಿಳಿಸಿದ್ದಾರೆ.

ದೆಹಲಿ ಹೈಕೋರ್ಟ್ ಬಾರ್ ಅಸೋಸಿಯೇಷನ್‌ನ ಜಂಟಿ ಕಾರ್ಯದರ್ಶಿ ಕುನಾಲ್ ಮಲ್ಹೋತ್ರಾ ಅವರು ಬೆದರಿಕೆ ನಕಲಿಯಾಗಿರುವ ಸಾಧ್ಯತೆ ಇದೆ. ಆದಾಗ್ಯೂ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗಿದ್ದು, ಅಗತ್ಯ ಭದ್ರತಾ ವ್ಯವಸ್ಥೆಗಳನ್ನು ಮಾಡಲಾಗಿದೆ. ಪೊಲೀಸರು ಹಾಗೂ ಭದ್ರತಾ ತಂಡಗಳು ಹೈಕೋರ್ಟ್ ಆವರಣದಲ್ಲಿ ಪರಿಶೀಲನೆ ನಡೆಸಿವೆ ಎಂದು ಅವರು ಹೇಳಿದ್ದಾರೆ.

ಆಗಸ್ಟ್ 15ರ ಸ್ವಾತಂತ್ರ್ಯೋತ್ಸವದ ಹಿನ್ನೆಲೆಯಲ್ಲಿ ದೆಹಲಿ ಸೇರಿದಂತೆ ದೇಶದ ಹಲವು ಭಾಗಗಳಲ್ಲಿ ಈಗಾಗಲೇ ಭದ್ರತೆ ಹೆಚ್ಚಿಸಲಾಗಿದೆ. ಪ್ರಮುಖ ಸ್ಥಳಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪೊಲೀಸ್ ಸಿಬ್ಬಂದಿಯನ್ನ ನಿಯೋಜಿಸಲಾಗಿದ್ದು, ನಗರ ಪ್ರವೇಶ ಮತ್ತು ನಿರ್ಗಮನ ಮಾರ್ಗಗಳಲ್ಲಿ ವಾಹನ ತಪಾಸಣೆ ತೀವ್ರಗೊಳಿಸಲಾಗಿದೆ.

ಜನಸಂದಣಿ ಹೆಚ್ಚಾಗುವ ಸಾಧ್ಯತೆ ಇರುವ ಸಾರ್ವಜನಿಕ ಸ್ಥಳಗಳ ಮೇಲೂ ಭದ್ರತಾ ಪಡೆಗಳು ನಿಗಾ ಇರಿಸಿವೆ.

ದೆಹಲಿಯ ಕೆಂಪುಕೋಟೆಯಲ್ಲಿ ಆಗಸ್ಟ್ 15ರಂದು ಪ್ರಧಾನಿ ನರೇಂದ್ರ ಮೋದಿ ಅವರು ದೇಶವನ್ನುದ್ದೇಶಿಸಿ ಭಾಷಣ ಮಾಡಲಿರುವ ಹಿನ್ನೆಲೆಯಲ್ಲಿ ರಾಜಧಾನಿಯಲ್ಲಿ ವಿಶೇಷ ಭದ್ರತಾ ವ್ಯವಸ್ಥೆ ಮಾಡಲಾಗಿದೆ.

ಇದಕ್ಕೂ ಮುನ್ನ ಆಗಸ್ಟ್ 3ರಂದು ದೆಹಲಿ ಮೇಯರ್ ಕಚೇರಿಗೂ ಬಾಂಬ್ ಬೆದರಿಕೆ ಇ–ಮೇಲ್ ಬಂದಿತ್ತು. ಇದು ಮೇಯರ್ ಕಚೇರಿಗೆ ಬಂದ ಎಂಟನೇ ಬೆದರಿಕೆ ಎಂದು ದೆಹಲಿ ಮಹಾನಗರ ಪಾಲಿಕೆ ತಿಳಿಸಿತ್ತು. ಅದೇ ದಿನ ದೆಹಲಿಯ ಹಲವು ಶಾಲೆಗಳಿಗೂ ಬಾಂಬ್ ಬೆದರಿಕೆಗಳು ಬಂದಿದ್ದವು. ಮಾಹಿತಿ ದೊರೆತ ಬಳಿಕ ದೆಹಲಿ ಪೊಲೀಸರು ಭದ್ರತಾ ತಪಾಸಣೆ ನಡೆಸಿದ್ದು, ಯಾವುದೇ ಅನುಮಾನಾಸ್ಪದ ವಸ್ತು ಪತ್ತೆಯಾಗಿರಲಿಲ್ಲ. ಅಧಿಕಾರಿಗಳ ಪ್ರಕಾರ, ಎಲ್ಲಾ ಅಗತ್ಯ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗಿತ್ತು.

# ವಿಧಾನ ಪರಿಷತ್ ಸಭಾಪತಿಯಾಗಿ ಸಲೀಂ ಅಹಮದ್ ಆಯ್ಕೆ

ಫರ್ನಾಂಡಿಸ್ ಅವರಂತಹ ಹಿರಿಯ ನಾಯಕರ ಸ್ಫೂರ್ತಿ–ಮಾರ್ಗದರ್ಶನ ನ ರಾಜಕೀಯ ಬದುಕಿಗೆ ಸದಾ ದಾರಿದೀಪವಾಗಿದೆ. ನನ್ನ ಸಾರ್ವಜನಿಕ ಜೀವನದ ಮೊದಲ ಪ್ರೇರಣೆಯನ್ನ ನಾನು ಜೀವನದಲ್ಲಿಯೇ ಪಡೆದುಕೊಂಡೆ. ಸ್ವಾತಂತ್ರ್ಯ ಹೋರಾಟಗಾರರಾದ ನನ್ನ ತಾತ ಮುಸ್ತಫಾ ಅಹ್ಮದ್ ಅವರ ವ್ಯಕ್ತಿತ್ವ ನನ್ನ ಮೇಲೆ ಆಳವಾದ ಪ್ರಭಾವ ಬೀರಿತು. ಅದೇ ಸಂದರ್ಭದಲ್ಲಿ ದಿ. ಇಂದಿರಾ ಗಾಂಧಿಯವರ ನಾಯಕತ್ವ ನನ್ನಂತಹ ಅನೇಕ ಯುವಕರಿಗೆ ಪ್ರೇರಣೆಯಾಯಿತು.

ಬಡವರು, ದುರ್ಬಲರು ಹಾಗೂ ಸಾಮಾನ್ಯ ಜನರ ಪರವಾಗಿ ನಿಲ್ಲುವ ರಾಜಕಾರಣದ ಮಹತ್ವವನ್ನು ಅವರ ನಾಯಕತ್ವ ನಮಗೆ ತಿಳಿಸಿತು. ಅವರ ಧೈರ್ಯ ಮತ್ತು ದೇಶದ ಏಕತೆ ಹಾಗೂ ಅಖಂಡತೆಗಾಗಿ ಅವರು ಮಾಡಿದ ಸೇವೆ ನನ್ನ ರಾಜಕೀಯ ಚಿಂತನೆಯ ಮೇಲೆ ಗಾಢವಾದ ಪ್ರಭಾವ ಬೀರಿತು. ನನ್ನ ವಿದ್ಯಾರ್ಥಿ ಜೀವನದ ಕಾಲಘಟ್ಟದಲ್ಲಿ ಶೇಷಾದ್ರಿಪುರಂ ಕಾಲೇಜಿನ ವಿದ್ಯಾರ್ಥಿ ನಾಯಕನಾಗಿದ್ದ ನಾನು ಓಖಗಖ ಸೇರಲು ಪ್ರಮುಖ ಕಾರಣ ಪ್ರಸ್ತುತ ಕೆಪಿಸಿಸಿ ಅಧ್ಯಕ್ಷರಾಗಿರುವ ಬಿ.ಕೆ ಹರಿಪ್ರಸಾದ್ ರವರು, ತದನಂತರ ಮಾಜಿ ಪ್ರಧಾನಿಗಳಾದ ದಿವಂಗತ ರಾಜೀವ್ ಗಾಂಧಿಯವರ ನಾಯಕತ್ವ ನನ್ನ ರಾಜಕೀಯ ಪಯಣಕ್ಕೆ ಹೊಸ ದಿಕ್ಕನ್ನು ನೀಡಿತು.

ಆಧುನಿಕ ಭಾರತ ನಿರ್ಮಾಣದ ಅವರ ಕನಸು, ಯುವಕರಿಗೆ ರಾಜಕೀಯದಲ್ಲಿ ಅವಕಾಶ ನೀಡಬೇಕೆಂಬ ಅವರ ಚಿಂತನೆ ಭಾರತವನ್ನ ಹಾಗೂ ವಿಜ್ಞಾನ–ತಂತ್ರಜ್ಞಾನ ಮತ್ತು ಅಭಿವೃದ್ಧಿಯ ಮೂಲಕ ಮುನ್ನಡೆಸಬೇಕೆಂಬ ಅವರ ದೂರದೃಷ್ಟಿ ನನ್ನಂತಹ ಯುವಕರಲ್ಲಿ ಹೊಸ ಭರವಸೆ ಮೂಡಿಸಿತು. ಮನಮೋಹನ್ ಸಿಂಗ್, ಸೋನಿಯಾ ಗಾಂಧಿ, ನನಗೆ ಅವಕಾಶ ನೀಡಿದರು. ಆ ಜವಾಬ್ದಾರಿ ದೇಶದ ವಿವಿಧ ಭಾಗಗಳ ಯುವಕರೊಂದಿಗೆ ಕೆಲಸ ಮಾಡುವ ಅವಕಾಶವನ್ನ ನೀಡಿತು. ಜೊತೆಗೆ ಕಾಂಗ್ರೆಸ್ ಪಕ್ಷದ ಜಾತ್ಯತೀತ, ಪ್ರಜಾಸತ್ತಾತ್ಮಕ ಹಾಗೂ ಜನಪರ ರಾಜಕಾರಣವನ್ನ ಇನ್ನಷ್ಟು ಹತ್ತಿರದಿಂದ ಅರ್ಥಮಾಡಿಕೊಳ್ಳಲು ನನಗೆ ಅವಕಾಶ ದೊರೆಯಿತು.

ಇಂದು ನಾನು ಈ ಗೌರವಾನ್ವಿತ ಸ್ಥಾನದಲ್ಲಿ ಕುಳಿತಿದ್ದರೆ, ಅದು ಕೇವಲ ನನ್ನ ವೈಯಕ್ತಿಕ ಸಾಧನೆಯಲ್ಲ. ಇದು ನನ್ನನ್ನು ಬೆಳೆಸಿದ ಕಾಂಗ್ರೆಸ್ ಪಕ್ಷದ ತತ್ವ–ಸಿದ್ಧಾಂತಗಳ ಫಲ. ನನ್ನ ಮೇಲೆ ನಂಬಿಕೆ ಹಿರಿಯ ನಾಯಕರ ಆಶೀರ್ವಾದದ ಫಲ. ಬಹುಮುಖ್ಯವಾಗಿ, ಕಳೆದ ನಾಲ್ಕು ದಶಕಗಳಿಂದ ನನ್ನೊಂದಿಗೆ ನಿಂತಿರುವ ಕಾಂಗ್ರೆಸ್ ಪಕ್ಷದ ಲಕ್ಷಾಂತರ ಕಾರ್ಯಕರ್ತರ ಅಪಾರ ಪ್ರೀತಿ ಮತ್ತು ವಿಶ್ವಾಸದ ಫಲ.

# ಗುಟ್ಕಾ ನಿಷೇಧ ಆದೇಶ ಶೀಘ್ರದಲ್ಲೇ ಹಿಂಪಡೆಯಲು ಸೂಚನೆ

ಬೀರುತ್ತದೆ ಎಂದು ಸಿಎಂ ತಿಳಿಸಿದ್ದಾರೆ. ಹೀಗಾಗಿ, ಗುಟ್ಕಾ ನಿಷೇಧ ಆದೇಶವನ್ನು ಶೀಘ್ರದಲ್ಲೇ ಹಿಂಪಡೆಯುವಂತೆ ಸೂಚನೆ ನೀಡಲಾಗಿದೆ. ಈ ಆದೇಶ ಇಂದೋ ಅಥವಾ ನಾಳೆಯೋ ಹೊರಬೀಳುವ ಸಾಧ್ಯತೆಯಿದೆ

## ದೇಶದ ಏಕತೆ, ಅಖಂಡತೆ ಹಾಗೂ ರಾಷ್ಟ್ರಭಕ್ತಿಯ ಸಂದೇಶ ಸಾರಿದ

# 300 ಮೀಟರ್ ಉದ್ದದ ತಿರಂಗಾ ಯಾತ್ರೆ



ವಿಜಯಪುರ, ಆ. 14: ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ಎಬಿವಿಪಿ) ವಿಜಯಪುರ ವತಿಯಿಂದ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ನಗರದ ಶ್ರೀ ಸಿದ್ಧೇಶ್ವರ ದೇವಸ್ಥಾನದಿಂದ ಗಾಂಧಿ ವೃತ್ತ, ಬಸವೇಶ್ವರ ವೃತ್ತದ ಮಾರ್ಗವಾಗಿ ಶಿವಾಜಿ ವೃತ್ತದವರೆಗೆ ಬೃಹತ್ ತಿರಂಗಾ ಯಾತ್ರೆ ನಡೆಯಿತು.

ಸುಮಾರು 300 ಮೀಟರ್ ಉದ್ದದ ರಾಷ್ಟ್ರಧ್ವಜ ಯಾತ್ರೆಯ ಪ್ರಮುಖ ಆಕರ್ಷಣೆಯಾಗಿತ್ತು. ನೂರಾರು ವಿದ್ಯಾರ್ಥಿಗಳು ಹಾಗೂ ಯುವಕರು ಕೈಯಲ್ಲಿ ರಾಷ್ಟ್ರಧ್ವಜ ಹಿಡಿದು ಶಿಸ್ತಿನಿಂದ ಯಾತ್ರೆಯಲ್ಲಿ ಪಾಲ್ಗೊಂಡರು. ಯಾತ್ರೆಯುದ್ದಕ್ಕೂ 'ಭಾರತ ಮಾತಾ ಕೀ ಜೈ', 'ವಂದೇ ಮಾತರಂ' ಸೇರಿದಂತೆ ದೇಶಭಕ್ತಿ ಘೋಷಣೆಗಳು ಮೊಳಗಿದವು. ನಗರದ ಪ್ರಮುಖ ರಸ್ತೆಗಳಲ್ಲಿ ತ್ರಿವರ್ಣ ಧ್ವಜ ರಾರಾಜಿಸುತ್ತಿದ್ದ ದೃಶ್ಯ ಸಾರ್ವಜನಿಕರ ಗಮನ ಸೆಳೆಯಿತು. ಮಕ್ಕಳು, ಯುವಕರು ಹಾಗೂ ಸಾರ್ವಜನಿಕರು ಯಾತ್ರೆಯನ್ನು ವೀಕ್ಷಿಸಿ ಮೊಬೈಲ್‌ಗಳಲ್ಲಿ ದೃಶ್ಯಗಳನ್ನು ಸೆರೆಹಿಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಎಬಿವಿಪಿ ಕೇಂದ್ರ ಕಾರ್ಯಸಮಿತಿ ಸದಸ್ಯ ಸಚಿನ್ ಕುಳಗೇರಿ, ರಾಷ್ಟ್ರಧ್ವಜ ಕೇವಲ ಒಂದು ಧ್ವಜವಲ್ಲ; ಅದು ದೇಶದ ಸ್ವಾಭಿಮಾನ, ಸಾರ್ವಭೌಮತ್ವ, ಏಕತೆ ಮತ್ತು ಅಖಂಡತೆಯ ಪ್ರತೀಕವಾಗಿದೆ ಎಂದರು. ಯುವಕರು ದೇಶದ ಇತಿಹಾಸ, ಸ್ವಾತಂತ್ರ್ಯ ಹೋರಾಟ ಹಾಗೂ ದೇಶಕ್ಕಾಗಿ ತ್ಯಾಗ ಮಾಡಿದ ಮಹನೀಯರ ಆದರ್ಶಗಳನ್ನು ತಿಳಿದುಕೊಳ್ಳಬೇಕು ಎಂದು ಕರೆ ನೀಡಿದರು. ಸ್ವಾತಂತ್ರ್ಯವನ್ನು ಆಚರಿಸುವುದಷ್ಟೇ ಅಲ್ಲದೆ, ದೇಶದ ಏಕತೆ ಮತ್ತು ಅಖಂಡತೆಯನ್ನು ಕಾಪಾಡುವ ಜವಾಬ್ದಾರಿಯನ್ನು ಯುವಜನತೆ ವಹಿಸಿಕೊಳ್ಳಬೇಕು. ಜಾತಿ, ಭಾಷೆ, ಪ್ರದೇಶ ಸೇರಿದಂತೆ ಎಲ್ಲ ಭೇದಗಳನ್ನು ಮೀರಿ ರಾಷ್ಟ್ರೀಯ ಏಕತೆಯನ್ನು ಬಲಪಡಿಸುವ ಕಾರ್ಯದಲ್ಲಿ ವಿದ್ಯಾರ್ಥಿಗಳು ಮುಂಚೂಣಿಯಲ್ಲಿ ನಿಲ್ಲಬೇಕು ಎಂದು ಹೇಳಿದರು.

ಎಬಿವಿಪಿ ರಾಜ್ಯ ಉಪಾಧ್ಯಕ್ಷೆ ಸುಮಾ ಬೋಳರಡ್ಡಿ, ಬಸವರಾಜ ಯಾದವಾಡ, ಹರ್ಷಾ ನಾಯಕ, ಅಮಿತಕುಮಾರ ಬಿರಾದಾರ, ಎಂ.ಎಸ್. ಬಿರಾದಾರ, ಹಣಮಂತ ಹಳ್ಳೂರ, ಸಂಜು ಕುಲಕರ್ಣಿ, ಸು–ರೇಖಾ ಕುಲಕರ್ಣಿ, ಮಂಜುನಾಥ ಹಳ್ಳಿ, ಬಾಲಾಜಿ ಬಿರಾದಾರ, ಸ್ನೇಹಾ ಚವಾಣ್, ಸೃಷ್ಟಿ ಚವಾಣ್, ಐಶ್ವರ್ಯ ಸಸಂಗಿ, ಸುನೀಲ ರಾಠೋಡ, ದುಂಡಪ್ಪ ನೆಲೋಗಿ, ಗಂಗಾಧರ ಯಾದವಾಡ, ಕಾರ್ತಿಕ ಬಿರಾದಾರ, ಪ್ರವೀಣ ಮಾದರ ಸೇರಿದಂತೆ ಎಬಿವಿಪಿ ಪದಾಧಿಕಾರಿಗಳು, ಕಾರ್ಯಕರ್ತರು, ವಿದ್ಯಾರ್ಥಿಗಳು ಹಾಗೂ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ಯಾತ್ರೆಗೆ ಎಬಿವಿಪಿ ಕೇಂದ್ರ ಕಾರ್ಯಸಮಿತಿ ಸದಸ್ಯ ಸಚಿನ್ ಕುಳಗೇರಿ, ಡಿವೈಎಸ್‌ಪಿ ನಾಗರಾಜ, ಪೊಲೀಸ್ ಅಧಿಕಾರಿಗಳಾದ ಪ್ರದೀಪ ತಳ್ಳಿಕೇರಿ, ಸಂಜು ಬಳಿಗಾರ ಹಾಗೂ ವಕೀಲ ಬಸವರಾಜ ಯಾದವಾಡ ಚಾಲನೆ ನೀಡಿದರು.

ವಿದ್ಯಾರ್ಥಿಗಳಲ್ಲಿ ಶೈಕ್ಷಣಿಕ ಬೆಳವಣಿಗೆಯೊಂದಿಗೆ ಸಾಮಾಜಿಕ ಜವಾಬ್ದಾರಿ, ರಾಷ್ಟ್ರ ನಿರ್ಮಾಣದ ಚಿಂತನೆ ಹಾಗೂ ದೇಶಭಕ್ತಿಯ ಮನೋಭಾವ ಬೆಳೆಸುವ ನಿಟ್ಟಿನಲ್ಲಿ ಎಬಿವಿಪಿ ನಿರಂತರವಾಗಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ ಎಂದು ತಿಳಿಸಲಾಯಿತು. ವಂದೇ ಮಾತರಂಗೆ 150 ವರ್ಷಗಳ ಹಿನ್ನೆಲೆ: ದೇಶದ ಪ್ರತಿಯೊಬ್ಬರಿಗೂ 'ವಂದೇ ಮಾತರಂ'ನ ಮಹತ್ವ ಹಾಗೂ ಅರ್ಥವನ್ನು ತಿಳಿಸುವ ಉದ್ದೇಶದಿಂದ ಎಬಿವಿಪಿ ದೇಶಾದ್ಯಂತ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ ಎಂದು ಸಚಿನ್ ಕುಳಗೇರಿ ತಿಳಿಸಿದರು.

## ದರೋಜಿ ಕೆರೆಗೆ ಜಿಂದಾಲ್ ಕಂಪನಿಯ ಕೆಮಿಕಲ್ ನೀರು?

# ಅಧಿಕಾರಿಗಳ ಮೌನಕ್ಕೆ ರೈತರ ಆಕ್ರೋಶ!



ಬಳ್ಳಾರಿ : ಜಿಂದಾಲ್ ಕಂಪನಿಯಿಂದ ಕೆಮಿಕಲ್ ನೀರನ್ನು ಕೆರೆಗೆ ಬಿಡಲಾಗುತ್ತಿದೆ ಎಂಬ ಗಂಭೀರ ಆರೋಪ ಕೇಳಿಬಂದಿದೆ. ಕೆರೆ ನೀರು ಕಲುಷಿತವಾಗುತ್ತಿದೆ. ಮೀನುಗಳು ಸಾಯುತ್ತಿವೆ, ರೈತರ ಬದುಕಿಗೆ ಆತಂಕ ಎದುರಾಗಿದೆ ಎಂಬ ಆರೋಪಗಳ ನಡುವೆಯೂ ಸಂಬಂಧ ಪಟ್ಟ ಅಧಿಕಾರಿಗಳು ಮೌನವಾಗಿದ್ದಾರೆ ಎನ್ನುವ ಆರೋಪ ಕೇಳಿ ಬರುತ್ತಿದೆ!

ನೂರಾರು ರೈತರಿಗೆ ಹಾಗೂ ಸುತ್ತಮುತ್ತಲಿನ ಜನರಿಗೆ ಜೀವನಾಡಿಯಾಗಿರುವ ಈ ಕೆರೆಯ ನೀರಿನ ಗುಣಮಟ್ಟದ ಬಗ್ಗೆ ಇದೀಗ ಗಂಭೀರ ಪ್ರಶ್ನೆಗಳು ಎದ್ದಿವೆ.

ಜಿಂದಾಲ್ ಕಂಪನಿಯಿಂದ ಕೆಮಿಕಲ್ ಮಿಶ್ರಿತ ನೀರನ್ನು ಕೆರೆಗೆ ಹರಿಸಲಾಗುತ್ತಿದೆ ಎಂಬ ಆರೋಪ ಕೇಳಿ ಬಂದಿದ್ದು ಇದ–ರಿಂದ ಕೆರೆ ನೀರು ಕಲಿಸಿತವಾಗುತ್ತಿದೆ ಮತ್ತು ಜಲಚರ ಗಳಿಗೆ ಹಾನಿಯಾಗುತ್ತಿದೆ ಎಂದು ಸ್ಥಳೀಯರು ಆತಂಕ ವ್ಯಕ್ತಪಡಿಸಿದ್ದಾರೆ ಇಷ್ಟೆಲ್ಲಾ ಆರೋಪಗಳು ಕೇಳಿ ಬರುತ್ತಿದ್ದರು ಸಂಬಂಧ ಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ? ನೀರಿನ ಮಾದರಿಗಳನ್ನು ಸಂಗ್ರಹಿಸಿ ಪ್ರಯೋಗಾಲಯಕ್ಕೆ ಕಳಿಸಲಾಗಿದೆಯೇ?

ಎಂಬ ಪ್ರಶ್ನೆಗಳು ಇದೀಗ ಸಾರ್ವಜನಿಕ ವಲಯದಲ್ಲಿ ಕೇಳಿ ಬರುತ್ತದೆ

ಈ ವಿಚಾರವಾಗಿ ಕರವೇ ಕಾವಲು ಪಡೆಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಡಾಕ್ಟರ್ ಹೆಚ್ ಸುರೇಶ್ ಅವರು ತೀವ್ರ ಆಕ್ರೋಶ ವ್ಯಕ್ತಪಡಿಸಲಿದ್ದಾರೆ.

ತಪ್ಪಿದಸ್ಥರು ಯಾರೇ ಆಗಿದ್ದರೂ ಕಾನೂನು ಬದ್ಧ ಕ್ರಮ ಕೈಗೊಳ್ಳಬೇಕು ಎಂದು ಅವರು ಅಗ್ರಹಿಸಿದ್ದಾರೆ, ಮತ್ತೊಂದೆಡೆ ಜನರ ಆರೋಗ್ಯ ರೈತರ ಬದುಕು ಮತ್ತು ಜಲ ಸಂಪನ್ಮೂಲಗಳ ರಕ್ಷಣೆ. ಅಭಿವೃದ್ಧಿಯ ಹೆಸರಿನಲ್ಲಿ ಪರಿಸರಕ್ಕೆ ಹಾನಿಯಾಗುತ್ತಿದ್ದರೆ ಅದನ್ನು ತಡೆಯುವ ಜವಾಬ್ದಾರಿ ಯಾರದು? ದರೋಜಿ ಕೆರೆಗೆ ನಿಜವಾಗಿಯೂ ಕೆಮಿಕಲ್ ತ್ಯಾಜ್ಯ ಸೇರುತ್ತದೆ ಸೇರುತ್ತಿದ್ದರೆ

ಅದರ ಮೂಲ ಯಾವುದು ಈ ಎಲ್ಲಾ ಪ್ರಶ್ನೆಗಳಿಗೆ ಅಧಿಕಾರಿಗಳು ಸ್ಥಳ ಪರಿಶೀಲನೆ ನೀರಿನ ವೈಜ್ಞಾನಿಕ ಪರೀಕ್ಷೆ ಮತ್ತು ಪಾರದರ್ಶಕ ತನಿಖೆಯ ಮೂಲಕ ಉತ್ತರ ನೀಡಬೇಕಿದೆ ಬದುಕನ್ನು ಉಳಿಸಿ.

## ಕೂಡ್ಲಿಗಿ ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಲು ಬಿಜೆಪಿ ಆಗ್ರಹ




ಕೂಡ್ಲಿಗಿ: ತಾಲೂಕಿನಲ್ಲಿ ಮಳೆ ಕೊರತೆ ಹಾಗೂ ಪ್ರತಿಕೂಲ ಹವಾಮಾನದಿಂದ ಕೃಷಿ ಚಟುವಟಿಕೆಗಳು ತೀವ್ರವಾಗಿ ಹಿನ್ನಡೆ ಕಂಡಿ–ದ್ದು, ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಬೆಳೆಗಳು ಒಣಗುತ್ತಿರುವ ಹಿನ್ನೆಲೆಯಲ್ಲಿ ರೈತರು ಆರ್ಥಿಕ ನಷ್ಟ ಎದುರಿಸುತ್ತಿದ್ದಾರೆ. ಕುಡಿಯುವ ನೀರು ಮತ್ತು ಜಾನುವಾರುಗಳಿಗೆ ಮೇವಿನ ಸಮಸ್ಯೆಯೂ ಎದುರಾಗುವ ಆತಂಕವಿದೆ ಎಂದು ತಾಲೂಕು ಬಿಜೆಪಿ ಮಂಡಲ ಅಧ್ಯಕ್ಷ ಕೆ.ನಾಗರಾಜ ನುಡಿದರು.

ಅವರು ಪಟ್ಟಣದ ತಾಲೂಕು ಆಡಳಿತಸೌಧದಲ್ಲಿ ಕೂಡ್ಲಿಗಿ ಮಂಡಲ ವತಿಯಿಂದ ಕೂಡ್ಲಿಗಿ ತಾಲೂಕನ್ನು ಬರಪೀಡಿತ ತಾಲೂಕು ಎಂದು ಘೋಷಿಸಿ, ರೈತರಿಗೆ ಅಗತ್ಯ ಪರಿಹಾರ ಹಾಗೂ ನೆರವು ನೀಡುವಂತೆ ತಹಶೀಲ್ದಾರ್‌ಮನವಿ ಮಾತನಾಡಿದರು. ಸಲ್ಲಿಸಿ

ಈ ಹಿನ್ನೆಲೆಯಲ್ಲಿ ತಾಲೂಕನ್ನು ಬರಪೀಡಿತ ತಾಲೂಕು ಎಂದು ಕೂಡಲೇ ಘೋಷಿಸಿ, ಅರ್ಹ ರೈತರಿಗೆ ಬೆಳೆ ನಷ್ಟ ಪರಿಹಾರ, ಇನ್ ಪುಟ್ ಸಬ್ಸಿಡಿ

ಹಾಗೂ ಅಗತ್ಯ ಪರಿಹಾರ ಕ್ರಮ ಕೈಗೊಳ್ಳಬೇಕು ಎಂದುಒತ್ತಾಯಿಸಿದ್ದಾರೆ. ಬರದ ಪರಿಸ್ಥಿತಿಯ ಕುರಿತು ಸಮಗ್ರ ಸಮೀಕ್ಷೆ ನಡೆಸಿ, ವಾಸ್ತವಾಂಶದ ಆಧಾರದ ಮೇಲೆ ಸರ್ಕಾರ–ಕ್ಕೆ ವರದಿ ಸಲ್ಲಿಸಿ ತುರ್ತು ಪರಿಹಾರ ಕ್ರಮ ಕೈಗೊಳ್ಳಬೇಕು. ರೈತರ ಹಿತದೃಷ್ಟಿಯಿಂದ ಕುಡಿಯುವನೀರು, ಜಾನುವಾರುಗಳಿಗೆ ಮೇವು ಹಾಗೂ ಉದ್ಯೋಗ ಖಾತ್ರಿ ಕೆಲಸ ಹೆಚ್ಚಿಸಬೇಕು ಎಂದು ತಿಳಿಸಿದರು.

ಬರ ಪರಿಸ್ಥಿತಿಯಿಂದ ಸಂಕಷ್ಟದಲ್ಲಿರುವ ರೈತರ ಪರವಾಗಿ

ಕೂಡ್ಲಿಗಿ: ಬರಪೀಡಿತ ತಾಲೂಕು ಘೋಷಣೆಗೆ ಆಗ್ರಹಿಸಿ ಮಂಡಲ ಬಿಜೆಪಿ ವತಿಯಿಂದ ತಹಶೀಲ್ದಾರ್‌ಗೆ ಮನವಿ ಸಲ್ಲಿಸಲಾಯಿತು.

ಸರ್ಕಾರ ಕೂಡಲೇ ಸ್ಪಂದಿಸಿ, ಸೂಕ್ತ ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು ಎಂಬ ಆಗ್ರಹದೊಂದಿಗೆ ಈ ಪ್ರತಿಭಟನೆ ನಡೆಸಲಾಯಿತು.

'ಜಿಲ್ಲಾ ಉಪಾಧ್ಯಕ್ಷ ಸೂರ್ಯ ಪಾಪಣ್ಣ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ವೀರೇಂದ್ರ, ಜಿಲ್ಲಾ ರೈತ ಮೋರ್ಚಾ ಅಧ್ಯಕ್ಷರಾದ ಎಚ್. ರೇವಣ್ಣ, ಜಿಲ್ಲಾ ಮಹಿಳಾ ಮೋರ್ಚಾ ಪ್ರಧಾನ ಕಾರ್ಯದರ್ಶಿ ಗೀತಮ್ಮ, ಜಿಲ್ಲಾ ಕಾರ್ಯದರ್ಶಿ ಸಚಿನ್ ಕುಮಾರ್, ಜಿಲ್ಲಾ ನಿಕಟಪೂರ್ವ ಕಾರ್ಯದರ್ಶಿ ಸಣ್ಣ ಬಾಲಪ್ಪ ಮಂಡಲ ಉಪಾಧ್ಯಕ್ಷ ಕುರಿಹಟ್ಟಿ ರಾಮಣ್ಣ ಮೋರ್ಚಾ ಅಧ್ಯಕ್ಷ ಗುರಿಕಾರ್ ರಾಘವೇಂದ್ರ, ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿಭರತ್ ರಾಮ್ ಸೇರಿದಂತೆ ಧನಂಜಯ್ ಗೌಡ, ಮುತ್ಯಪ್ಪಾಲಯ್ಯ, ವಾಗೀಶ್ ಮೂರ್ತಿ, ಗುಡೆ–ಕೋಟೆ ಕುಬೇರ, ಶಿವಪುರ ಶಿವು, ಚಿಕ್ಕಜೋಗಳ್ಳಿ ನಾಗಣ್ಣ ಸೋಲ್ಲೇಶ್, ಅಂಬಾಲಿ ಹನುಮಂತಪ್ಪ ಗುಜ್ಜಲ್ ಗಣೇಶ್, ಗೋವಿಂದಗಿರಿ ಓಬಳೇಶ್ ಸೇರಿದಂತೆ ಇತರರು ಇದ್ದರು.

## ಕಾಶಪ್ಪನವರ ಹೇಳಿಕೆಗೆ ಭೀಮ್ ರಾಜ್ಯ ದಲಿತ ಸೇವಾ ಸಮಿತಿ ತೀವ್ರ ಖಂಡನೆ




ವಿಜಯಪುರ, ಆ. 14:

ದಲಿತ ಹಾಗೂ ಶೋಷಿತ ಸಮುದಾಯಗಳ ಕುರಿತು ವಿಜಯಾನಂದ ಕಾಶಪ್ಪನವರ ಅವರು ಹಗುರವಾಗಿ ಹಾಗೂ ಉದ್ಧಟತನದಿಂದ ಮಾತನಾಡಿರುವುದನ್ನು ಭೀಮ್ ರಾಜ್ಯ ದಲಿತ ಸೇವಾ ಸಮಿತಿ (ರಿ.) ರಾಜ್ಯಾಧ್ಯಕ್ಷ ಅಪ್ಪುರಾಜ ನಿಮಾದಾರ ಅವರು ತೀವ್ರವಾಗಿ ಖಂಡಿಸಿದ್ದಾರೆ. ದಲಿತರು ಹಾಗೂ ಶೋಷಿತ ಸಮುದಾಯಗಳು ಸಮಾಜದ ಅವಿಭಾಜ್ಯ ಅಂಗವಾಗಿದ್ದು, ಅವರ ಸ್ವಾಭಿಮಾನ, ಹಕ್ಕುಗಳು ಮತ್ತು ಸಾಮಾಜಿಕ ನ್ಯಾಯವನ್ನು ಗೌರವಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಸಂವಿಧಾನವು ಎಲ್ಲ ನಾಗರಿಕರಿಗೂ ಸಮಾನತೆ, ಸ್ವಾತಂತ್ರ್ಯ ಹಾಗೂ ಗೌರವದಿಂದ ಬದುಕುವ ಹಕ್ಕು ನೀಡಿದೆ ಎಂದು ಅವರು ತಿಳಿಸಿದ್ದಾರೆ.

ಸಾರ್ವಜನಿಕ ಜೀವನದಲ್ಲಿರುವವರು ಜವಾಬ್ದಾರಿಯುತವಾಗಿ ಮಾತನಾಡಬೇಕು. ದಲಿತ ಹಾಗೂ ಶೋಷಿತ ಸಮುದಾಯಗಳ ಭಾವನೆಗಳಿಗೆ ಧಕ್ಕೆ ತರುವಂತಹ ಹೇಳಿಕೆಗಳನ್ನು ಯಾವುದೇ ಕಾರಣಕ್ಕೂ ಸಹಿಸಲು ಸಾಧ್ಯವಿಲ್ಲ. ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಮತ್ತು ಸಹೋದರತ್ವ ಕಾಪಾಡುವ ನಿಟ್ಟಿನಲ್ಲಿ ಎಲ್ಲರೂ ನಡೆದುಕೊಳ್ಳಬೇಕು ಎಂದು ಅಪ್ಪುರಾಜ ನಿಮಾದಾರ ಒತ್ತಾಯಿಸಿದ್ದಾರೆ. ವಿಜಯಾನಂದ ಕಾಶಪ್ಪನವರ ಅವರು ತಮ್ಮ ಹೇಳಿಕೆಯನ್ನು ಪರಿಶೀಲಿಸಿ, ಅದರಿಂದ ದಲಿತ ಹಾಗೂ ಶೋಷಿತ ಸಮುದಾಯಗಳ ಭಾವನೆಗಳಿಗೆ ನೋವುಂಟಾಗಿದ್ದರೆ ಕೂಡಲೇ ಸ್ಪಷ್ಟನೆ ನೀಡಿ, ಹೇಳಿಕೆಯನ್ನು ಹಿಂಪಡೆಯಬೇಕು ಎಂದು ಆಗ್ರಹಿಸಿದ್ದಾರೆ. ದಲಿತರು, ಹಿಂದುಳಿದವರು ಹಾಗೂ ಶೋಷಿತ ಸಮುದಾಯಗಳ ಸ್ವಾಭಿಮಾನಕ್ಕೆ ಧಕ್ಕೆ ತರುವ ಯಾವುದೇ ಹೇಳಿಕೆಗಳ ವಿರುದ್ಧ ಭೀಮ್ ರಾಜ್ಯ ದಲಿತ ಸೇವಾ ಸಮಿತಿ ನಿರಂತರವಾಗಿ ಧ್ವನಿ ಎತ್ತಲಿದೆ. ಸಾಮಾಜಿಕ ನ್ಯಾಯ ಮತ್ತು ಸಮಾನತೆಯ ಪರವಾಗಿ ಸಂಘಟನೆಯ ಹೋರಾಟ ಮುಂದುವರಿಯಲಿದೆ ಎಂದು ಅವರು ತಿಳಿಸಿದ್ದಾರೆ.

## ಆಗಸ್ಟ್ 21ರಂದು ಶ್ರೀ ಬುಳ್ಳಣ್ಣ ಸಿದ್ದೇಶ್ವರ ನೂತನ ದೇವಸ್ಥಾನದ ಕಳಸಾರೋಹಣ

ತಿಕೋಟಾ, ಆ. 14: ತಾಲ್ಲೂಕಿನ ಬಿಜ್ಜರಗಿ ಗ್ರಾಮದ ಶ್ರೀ ಬುಳ್ಳಣ್ಣ ಸಿದ್ದೇಶ್ವರ ನೂತನ ದೇವಸ್ಥಾನದ ವಾಸ್ತುಶಾಂತಿ, ಮೂರ್ತಿ ಪ್ರತಿಷ್ಠಾಪನೆ ಹಾಗೂ ಕಳಸಾರೋಹಣ ಮಹೋತ್ಸವವು ಆಗಸ್ಟ್ 21ರಂದು ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ನಡೆಯಲಿದೆ.

ಶರಣರ ನಾಡು, ಸಂತರ ಬೀಡು ಹಾಗೂ ನಡೆದಾಡಿದ ದೇವರ ಜ್ಞಾನಯೋಗಿ ಪರಮಪೂಜ್ಯ ಶ್ರೀ ಸಿದ್ದೇಶ್ವರ ಅಪ್ಪಾಜಿ ಜನ್ಮಸ್ಥಳ, ಗಣಿತ ತಜ್ಞ ಭಾಸ್ಕರಾಚಾರ್ಯರ ಪವಿತ್ರ ನೆಲ ಹಾಗೂ ಕಲಿಯುಗದ ಭೂಕೈಲಾಸವೆಂದು ಪ್ರಸಿದ್ಧವಾಗಿರುವ ಬಿಜ್ಜರಗಿ ಗ್ರಾಮವು ತನ್ನದೇ ಆದ ಐತಿಹಾಸಿಕ ಮತ್ತು ಆಧ್ಯಾತ್ಮಿಕ ವೈಭವ ಹೊಂದಿದೆ.

ಮಾಳಿಂಗರಾಯರ ಆಶೀರ್ವಾದದಿಂದ ಜನಿಸಿ, ಗುರುಸೇವೆಯಲ್ಲಿ ಜೀವನ ಕಳೆದ ಶ್ರೀ ಬುಳ್ಳಣ್ಣ ಸಿದ್ದೇಶ್ವರರು ಕೊನೆಗೆ ಬಿಜ್ಜರಗಿ ಗ್ರಾಮದಲ್ಲಿ ನೆಲೆಸಿ ಭಕ್ತರ ಕಷ್ಟಗಳನ್ನು ಪರಿಹರಿಸುವ ದೈವಸ್ವರೂಪಿಯಾಗಿ ಪ್ರಸಿದ್ಧರಾದರು. ಬೇಡಿದವರಿಗೆ ಬೇಡಿದ ವರ ನೀಡುವ ಕರುಣಾಮೂರ್ತಿಯಾಗಿ ಇಂದಿಗೂ ಸಾವಿರಾರು ಭಕ್ತರ ನಂಬಿಕೆಯ ಬೆಳಕಾಗಿದ್ದಾರೆ.

ದೇವಾಲಯವು ಕೇವಲ ಕಲ್ಲು, ಸಿಮೆಂಟ್ ಮತ್ತು ಕಟ್ಟಡವಲ್ಲ. ಅದು ಭಕ್ತಿ, ನಂಬಿಕೆ, ಸಂಸ್ಕೃತಿ, ಪರಂಪರೆ ಹಾಗೂ ಆಧ್ಯಾತ್ಮಿಕತೆಯ ಜೀವಂತ ಸಂಕೇತವಾಗಿದೆ. ದೇವರ ಸನ್ನಿಧಿಗೆ ಬರುವ ಪ್ರತಿಯೊಬ್ಬ ಭಕ್ತನಿಗೂ ಮನಸ್ಸಿಗೆ ಶಾಂತಿ, ಧೈರ್ಯ ಹಾಗೂ ಹೊಸ ಭರವಸೆ ದೊರೆ–ಯುತ್ತದೆ. ದೇವಾಲಯಗಳಲ್ಲಿನ ಪೂಜೆ, ಭಜನೆ, ಪ್ರವಚನ, ಅನ್ನದಾಸೋಹ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಸಮಾಜದಲ್ಲಿ ಪ್ರೀತಿ, ಸಹೋದರತ್ವ, ಸಹಕಾರ ಮತ್ತು ಐಕ್ಯತೆಯನ್ನು ಬೆಳೆಸುತ್ತವೆ.

ಶ್ರೀ ಬುಳ್ಳಣ್ಣ ಸಿದ್ದೇಶ್ವರ ದೇವಸ್ಥಾನದಲ್ಲಿ ಯಾವುದೇ ಜಾತಿ, ಮತ, ಪಂಥದ ಭೇದವಿಲ್ಲದೆ ಸರ್ವಧರ್ಮದ ಭಕ್ತರು ಭಕ್ತಿಯಿಂದ ಪೂಜೆ ಸಲ್ಲಿಸುತ್ತಾರೆ. ಬೇಡಿದ ಭಕ್ತರಿಗೆ ವರ ನೀಡುವ ಮಹಿಮಾಪುರುಷ ಶ್ರೀ ಬುಳ್ಳಣ್ಣ ಸಿದ್ದೇಶ್ವರರ ನೂತನ ದೇವಸ್ಥಾನ ನಿರ್ಮಾಣಗೊಂಡಿದ್ದು, ಇದರ ಕಳಸಾರೋಹಣದ ಅಂಗವಾಗಿ ಏಳು ದಿನಗಳ ಕಾಲ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಆಗಸ್ಟ್ 15ರಿಂದ ಪ್ರತಿದಿನ ಸಂಜೆ ಆಧ್ಯಾತ್ಮಿಕ ಪ್ರವಚನಗಳು, ಪ್ರಸಾದ ವ್ಯವಸ್ಥೆ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ. ಆಗಸ್ಟ್ 20ರಂದು ವಿವಿಧ ದೇವರುಗಳ ಪವಿತ್ರ ಭೇಟಿ ಹಾಗೂ ಆಗಸ್ಟ್ 21ರಂದು ರಾಜಯೋಗದೊಂದಿಗೆ ಕಳಸಾರೋಹಣ ಮಹೋತ್ಸವ ನೆರವೇರಲಿದೆ.

## ಕೆಪಿಎಸ್‌ಸಿ ನೇಮಕಾತಿಗೆ ಹೊಸ ವ್ಯವಸ್ಥೆ: 3ರಿಂದ 5 ತಿಂಗಳಲ್ಲಿ ಆಯ್ಕೆ ಪ್ರಕ್ರಿಯೆ ಪೂರ್ಣಗೊಳಿಸಲು ಗುರಿ

ಬೆಂಗಳೂರು, ಆ.14 : ಕರ್ನಾಟಕ ಲೋಕಸೇವಾ ಆಯೋಗದ (ಕೆಪಿಎಸ್‌ಸಿ) ನೇಮಕಾತಿ ಪ್ರಕ್ರಿಯೆಯನ್ನು ಮತ್ತಷ್ಟು ಪಾರದರ್ಶಕ, ತಂತ್ರಜ್ಞಾನಾಧಾರಿತ ಹಾಗೂ ತ್ವರಿತಗೊಳಿಸಲು ಹೊಸ ವ್ಯವಸ್ಥೆ ಜಾರಿಗೆ ತರಲು ನಿರ್ಧರಿಸಲಾಗಿದೆ.

ಆಯೋಗದ ಸಭೆಯಲ್ಲಿ ನೂತನ ಪರೀಕ್ಷಾ ನಿಯಂತ್ರಕರಾಗಿ ಅಧಿಕಾರ ವಹಿಸಿಕೊಂಡಿರುವ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ (ಕೆಇಎ) ಕಾರ್ಯನಿರ್ವಾಹಕ ನಿರ್ದೇಶಕ ಹೆಚ್. ಪ್ರಸನ್ನ ಅವರನ್ನು ಆತ್ಮೀಯವಾಗಿ ಸ್ವಾಗತಿಸಲಾಯಿತು. ಈ ವೇಳೆ ಮುಂದಿನ ದಿನಗಳಲ್ಲಿ ಕೇಂದ್ರ ಲೋಕಸೇವಾ ಆಯೋಗದ (ಯುಪಿಎಸ್‌ಸಿ) ಮಾದರಿಯಲ್ಲಿ ನೇಮಕಾತಿ ಪ್ರಕ್ರಿಯೆ ನಡೆಸುವ ಕುರಿತು ಚರ್ಚೆ ನಡೆಯಿತು. ಪರೀಕ್ಷಾ ವ್ಯವಸ್ಥೆಯಲ್ಲಿ ಪಾರದರ್ಶಕತೆ ಹೆಚ್ಚಿಸುವುದು ಹಾಗೂ ತಂತ್ರಜ್ಞಾನವನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು 3ರಿಂದ 5 ತಿಂಗಳೊಳಗೆ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳಿಸುವ ಗುರಿಯನ್ನು ಹೆಚ್. ಪ್ರಸನ್ನ ಅವರು ವಿವರಿಸಿದರು.

ಇನ್ನು ಮುಂದೆ ನೇಮಕಾತಿ ಪರೀಕ್ಷೆ ಮುಗಿದ ಕೂಡಲೇ ಆಯಾ ಜಿಲ್ಲೆಗಳಲ್ಲಿ ಲಭ್ಯವಿರುವ ಸ್ಕ್ಯಾನಿಂಗ್ ಯಂತ್ರಗಳ ಮೂಲಕ ಔಒಖ ಉತ್ತರ ಪತ್ರಿಕೆಗಳನ್ನು ಸ್ಕ್ಯಾನ್ ಮಾಡಿ, ಕೆಪಿಎಸ್‌ಸಿಯ ಅಧಿಕೃತ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡುವ ವ್ಯವಸ್ಥೆ ಕಲ್ಪಿಸಲಾಗುವುದು. ಇದರಿಂದ ಅಭ್ಯರ್ಥಿಗಳು ತಮ್ಮ ಔಒಖ ಉತ್ತರ ಪತ್ರಿಕೆಗಳನ್ನು ಪರಿಶೀಲಿಸಲು ಅವಕಾಶ ದೊರೆಯಲಿದೆ. ಅಲ್ಲದೆ, ಪರೀ–ಕ್ಷೆ ಪೂರ್ಣಗೊಂಡ ಒಂದು ವಾರದೊಳಗೆ ಫಲಿತಾಂಶ ಪ್ರಕಟಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಲಾಯಿತು. ಸಭೆಯಲ್ಲಿ ಆಯೋಗದ ಸದಸ್ಯರು ವಿವಿಧ ಸಲಹೆಗಳನ್ನು ನೀಡಿದ್ದು, ನೇಮಕಾತಿ ಪ್ರಕ್ರಿಯೆಯನ್ನು ಸಂಪೂರ್ಣ ಪಾರದರ್ಶಕವಾಗಿ ಹಾಗೂ ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸಲು ಅಗತ್ಯ ಸಹಕಾರ ನೀಡುವುದಾಗಿ ತಿಳಿಸಿದರು. ಸರ್ಕಾರಿ ಉದ್ಯೋಗದ ನೇಮಕಾತಿಗೆ ಸಂಬಂಧಿಸಿದಂತೆ ಅಭ್ಯರ್ಥಿಗಳು ಯಾವುದೇ ವ್ಯಕ್ತಿಗಳ ಆಮಿಷಗಳಿಗೆ ಒಳಗಾಗದೆ, ವದಂತಿಗಳಿಗೆ ಕಿವಿಗೊಡದೆ ಆಯೋಗದ ಅಧಿಕೃತ ಮಾಹಿತಿಯನ್ನು ಮಾತ್ರ ಅವಲಂಬಿಸುವಂತೆ ಕೆಪಿಎಸ್‌ಸಿ ಮನವಿ ಮಾಡಿದೆ. ಮಧ್ಯವರ್ತಿಗಳು ಅಥವಾ ಅನಧಿಕೃತ ವ್ಯಕ್ತಿಗಳ ಭರವಸೆಗಳಿಗೆ ಬಲಿಯಾಗದೆ, ಪರೀಕ್ಷೆಗಳಿಗೆ ಸಿದ್ಧತೆ ನಡೆಸಿ ಸರ್ಕಾರಿ ಉದ್ಯೋಗದ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳುವಂತೆ ಸೂಚಿಸಿದೆ. ಯುಪಿಎಸ್‌ಸಿ ಮಾದರಿಯ ಪಾರದರ್ಶಕತೆ, ತಂತ್ರಜ್ಞಾನ ಬಳಕೆ ಹಾಗೂ ತ್ವರಿತ ನೇಮಕಾತಿ ವ್ಯವಸ್ಥೆಯನ್ನು ಅಳವಡಿಸಿಕೊಂಡು ಅರ್ಹ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಯನ್ನು ವೇಗವಾಗಿ ಪೂರ್ಣಗೊಳಿಸಲು ಸಭೆಯಲ್ಲಿ ಒಮ್ಮತದ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಕೆಪಿಎಸ್‌ಸಿ ಪ್ರಕಟಣೆಯಲ್ಲಿ ತಿಳಿಸಿದೆ.

## ಬಿಎಸ್‌ಎನ್‌ಎಲ್ ಗ್ರಾಹಕರಿಗೆ ಆಗಸ್ಟ್ ತಿಂಗಳ ವಿಶೇಷ ಕೊಡುಗೆ

ವಿಜಯಪುರ, ಆ.14 : ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಬಿಎಸ್‌ಎನ್‌ಎಲ್ ಸಂಸ್ಥೆಯು ತನ್ನ ಮೊಬೈಲ್ ಹಾಗೂ ಫೈಬರ್ ಗ್ರಾಹಕರಿಗಾಗಿ ವಿಶೇಷ ಆಫರ್‌ಗಳನ್ನು ಪ್ರಕಟಿಸಿದೆ. ಹೊಸ ಹಾಗೂ ಪೋರ್ಟ್–ಇನ್ ಆಗುವ ಮೊಬೈಲ್ ಗ್ರಾಹಕರಿಗೆ ಕೇವಲ 1ಕ್ಕೆ 'ಫ್ರೀಡಂ ಪ್ಲಾನ್' ಪರಿಚಯಿಸಲಾಗಿದೆ. ಈ ಯೋಜನೆಯಡಿ 24 ದಿನಗಳ ಅವಧಿಗೆ ಪ್ರತಿದಿನ 1 ಜಿಬಿ ಡೇಟಾ, ಅನಿಯಮಿತ ಕರೆಗಳು ಹಾಗೂ ದಿನಕ್ಕೆ 100 ಎಸ್‌ಎಂಎಸ್ ಸೌಲಭ್ಯ ದೊರೆಯಲಿದೆ. ಅದೇ ರೀತಿ, 51ರ ಸಾಮಾನ್ಯ ಪ್ಲಾನ್‌ನಲ್ಲಿ 28 ದಿನಗಳ ಅವಧಿಗೆ ಪ್ರತಿದಿನ 2 ಜಿಬಿ ಡೇಟಾ, ಅನಿಯಮಿತ ಕರೆಗಳು ಹಾಗೂ ದಿನಕ್ಕೆ 100 ಎಸ್‌ಎಂಎಸ್ ಸೌಲಭ್ಯ ನೀಡಲಾಗುತ್ತದೆ.

ಫೈಬರ್ ಇಂಟರ್ನೆಟ್ ಸೇವೆಯಡಿ ಹೊಸ ಗ್ರಾಹಕರಿಗಾಗಿ ತಿಂಗಳಿಗೆ 1,111ರ 'ಸೂಪರ್ ಪ್ಲಸ್ ಒಟಿಟಿ ಪ್ಲಾನ್' ಘೋಷಿಸಲಾಗಿದೆ. ಈ ಯೋಜನೆಯಲ್ಲಿ 200 ಎಂಬಿಪಿಎಸ್ ವೇಗದ ಇಂಟರ್ನೆಟ್, 27 ಒಟಿಟಿ ಆಪ್‌ಗಳು, ಡ್ಯುಯಲ್ ಬ್ಯಾಂಡ್ ವೈ–ಫೈ ಹಾಗೂ ಅನಿಯಮಿತ ಕರೆ ಸೌಲಭ್ಯ ಲಭ್ಯವಿರಲಿದೆ. ಗ್ರಾಮೀಣ ಭಾಗದ ಗ್ರಾಹಕರಿಗಾಗಿ ತಿಂಗಳಿಗೆ 259ರ 'ರೂರಲ್ ಎಂಟ್ರಿ ಪ್ಲಾನ್' ಪರಿಚಯಿಸಲಾಗಿದ್ದು, 25 ಎಂಬಿಪಿಎಸ್ ವೇಗದ ಇಂಟರ್ನೆಟ್, ವೇವ್ಸ್ ಒಟಿಟಿ ಹಾಗೂ ಅನಿಯಮಿತ ಕರೆ ಸೌಲಭ್ಯ ದೊರೆಯಲಿದೆ. ಹೆಚ್ಚುವರಿಯಾಗಿ 199 ಪಾವತಿಸಿ ಸೋನಿ ಲೈವ್, ಜಿಯೋಹಾಟ್‌ಸ್ಟಾರ್ ಹಾಗೂ ಜೀ5 ಆಪ್‌ಗಳನ್ನು ಪಡೆಯಬಹುದಾಗಿದೆ.

# ದ್ವಿಭಾಷಾ ಬೋಧನೆ ಜಾರಿಯ ಸಮಸ್ಯೆ ಸರಿಪಡಿಸಿ: ಅಖಿಲ ಭಾರತೀಯ ಸಾಹಿತ್ಯ ಪರಿಷದ್ ಒತ್ತಾಯ

ಬಳ್ಳಾರಿ, ಆ.14: ರಾಜ್ಯದ ಸರ್ಕಾರಿ ಶಾಲೆಗಳಲ್ಲಿ 5ನೇ ತರಗತಿವರೆಗೆ ಕನ್ನಡ ಮತ್ತು ಆಂಗ್ಲ ಮಾಧ್ಯಮಗಳಲ್ಲಿ ದ್ವಿಭಾಷಾ ಬೋಧನೆ ಜಾರಿಗೊಳಿಸಿರುವ ಸರ್ಕಾರದ ಕ್ರಮದಿಂದ ಶಿಕ್ಷಣ ಕ್ಷೇತ್ರದಲ್ಲಿ ಹಲವು ಗೊಂದಲಗಳು ಉಂಟಾಗಿದ್ದು, ಕೂಡಲೇ ಈ ಸಮಸ್ಯೆಯನ್ನು ಸರಿಪಡಿಸಬೇಕು ಎಂದು ಅಖಿಲ ಭಾರತೀಯ ಸಾಹಿತ್ಯ ಪರಿಷದ್ ಬಳ್ಳಾರಿ ಜಿಲ್ಲಾ ಸಮಿತಿ ಆಗ್ರಹಿಸಿದೆ.

ಈ ಕುರಿತು ಶುಕ್ರವಾರ ಜಿಲ್ಲಾ ಹಾಗೂ ತಾಲೂಕು ಸಮಿತಿಯ ಪದಾಧಿಕಾರಿಗಳು ರಾಷ್ಟ್ರಪತಿಗಳಿಗೆ ಬಳ್ಳಾರಿ ಜಿಲ್ಲಾಧಿಕಾರಿ ಮೂಲಕ ತಹಸೀಲ್ದಾರ್ ಅವರಿಗೆ ಮನವಿ ಸಲ್ಲಿಸಿದರು. ದ್ವಿಭಾಷಾ ಕಲಿಕೆ ಎಂದು ಸರ್ಕಾರ ಹೇಳಿದ್ದರೂ,



ಹಲವು ಪಾಠಗಳು ಹಾಗೂ ಪದ್ಯಗಳನ್ನು ಆಂಗ್ಲ ಭಾಷೆಯಲ್ಲೇ ಬೋಧಿಸಲಾಗುತ್ತಿದೆ. ಪರೀಕ್ಷೆಗಳಲ್ಲಿ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಪ್ರಶ್ನೆಗಳು ಒಂದೇ ರೀತಿಯದ್ದಾಗಿದ್ದರೂ, ಉತ್ತರದ ಭಾಷೆಗೆ ಅನುಗುಣವಾಗಿ ಶ್ರೇಣಿ ನೀಡಲಾಗುತ್ತಿದೆ ಎಂದು ಸಮಿತಿ ಆರೋಪಿಸಿದೆ.

ಆಂಗ್ಲ ಭಾಷೆಯಲ್ಲಿ ಉತ್ತರಿಸಿದ ವಿದ್ಯಾರ್ಥಿಗಳಿಗೆ 'ಎ ಪ್ಲಸ್' ಹಾಗೂ ಕನ್ನಡದಲ್ಲಿ ಉತ್ತರಿಸಿದವರಿಗೆ 'ಬಿ ಪ್ಲಸ್' ಶ್ರೇಣಿ ನೀಡುತ್ತಿರುವುದು ಮಾತೃಭಾಷೆಯಲ್ಲಿ ಕಲಿಯುವ ಮಕ್ಕಳಿಗೆ ಅನ್ಯಾಯವಾಗಲಿದೆ ಎಂದು ಪದಾಧಿಕಾರಿಗಳು ದೂರಿದರು. ಇಂತಹ ಕ್ರಮದಿಂದ ವಿದ್ಯಾರ್ಥಿಗಳಲ್ಲಿ ಕನ್ನಡ ಭಾಷೆಯ ಬಗ್ಗೆ ಆಸಕ್ತಿ ಕಡಿಮೆಯಾಗುವ ಸಾಧ್ಯತೆಯಿದ್ದು, ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಮೇಲೆ ಪರಿಣಾಮ ಬೀರುವ ಆತಂಕವಿದೆ ಎಂದು ತಿಳಿಸಿದರು.

ದಿಢೀರ್ ಆಗಿ ಜಾರಿಗೆ ತಂದಿರುವ ಹೊಸ ಬೋಧನಾ ನೀತಿಯಿಂದ ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಪೋಷಕರಲ್ಲಿ ಗೊಂದಲ ಉಂಟಾಗಿದೆ. ಶಿಕ್ಷಣ ಕ್ಷೇತ್ರದ ಮೇಲೆ ಉಂಟಾಗಬಹುದಾದ ಪರಿಣಾಮಗಳನ್ನು ಪರಿಗಣಿಸಿ ಸರ್ಕಾರ ಈ ನೀತಿಯನ್ನು ಮರುಪರಿಶೀಲಿಸಿ, ಅಗತ್ಯ ತಿದ್ದುಪಡಿ ಮಾಡಬೇಕು ಎಂದು ಒತ್ತಾಯಿಸಿದರು.

ಇದೇ ವೇಳೆ ಶಾಲಾ ಶಿಕ್ಷಣ ಇಲಾಖೆಯು ಸುಮಾರು 15 ಸಾವಿರ ಶಿಕ್ಷಕರ ನೇಮಕಾತಿಗೆ ಕರಡು ಸೂಚನೆ ಹೊರಡಿಸಿದ್ದು, ಅದರಲ್ಲಿ ಕನ್ನಡ ಶಿಕ್ಷಕರ ನೇಮಕಾತಿಗೆ ಸೂಕ್ತ ಆದ್ಯತೆ ನೀಡದಿರುವುದು ಖಂಡನೀಯ ಎಂದು ಸಮಿತಿ ಅಸಮಾಧಾನ ವ್ಯಕ್ತಪಡಿಸಿತು. ವಿಜ್ಞಾನ, ಗಣಿತ ಸೇರಿದಂತೆ ವಿವಿಧ ವಿಷಯಗಳ ಶಿಕ್ಷಕರ ನೇಮಕಾತಿಯಲ್ಲಿ ಆಂಗ್ಲ ಭಾಷೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡಿರುವುದು ಕನ್ನಡ ಮಾಧ್ಯಮದ ವಿದ್ಯಾರ್ಥಿಗಳ ಹಿತಾಸಕ್ತಿಗೆ ವಿರುದ್ಧವಾಗಿದೆ ಎಂದು ಆರೋಪಿಸಿದರು.

ಮಾತೃಭಾಷೆಯ ಮೂಲಕ ಗುಣಮಟ್ಟದ ಶಿಕ್ಷಣ ದೊರೆಯುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಹಾಗೂ ಕನ್ನಡ ಶಿಕ್ಷಕರ ನೇಮಕಾತಿಗೆ ಆದ್ಯತೆ ನೀಡಬೇಕು. ವಿದ್ಯಾರ್ಥಿಗಳು ಮತ್ತು ಪೋಷಕರಲ್ಲಿ ಉಂಟಾಗಿರುವ ಗೊಂದಲವನ್ನು ನಿವಾರಿಸಿ, ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಸಂರಕ್ಷಣೆಗೆ ಸರ್ಕಾರ ಮುಂದಾಗಬೇಕು ಎಂದು ಸಮಿತಿಯ ಪದಾಧಿಕಾರಿಗಳು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಮಹಿಳಾ ಪ್ರಮುಖರಾದ ಚಂದ್ರಿಕಾ ಚಂದ್ರಕಾಂತ್, ತಾಲೂಕು ಅಧ್ಯಕ್ಷ ಶ್ರೀನಾಥ್ ಜೋಶಿ, ಜಿಲ್ಲಾ ಕಾರ್ಯದರ್ಶಿ ಯು. ರಮೇಶ್, ಚಾರುಲತಾ, ರವಿಕುಮಾರ್, ವಸಂತ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸರ್ಕಾರ ಮಂಜೂರು ಮಾಡಿದ ಜಮೀನಿಗಾಗಿ ರೈತರ ಮನವಿ ಗೋವರ್ಧನ್ ಹಾಗೂ ಸಹಚರರ ವಿರುದ್ಧ ಕ್ರಮ ಕೈಗೊಳ್ಳಿ: ಎಸ್‌ಪಿಗೆ ಚರಕುಂಟೆ ರೈತರ ದೂರು




ಬಳ್ಳಾರಿ, ಆ.14: ಸರ್ಕಾರ ಮಂಜೂರು ಮಾಡಿರುವ ಜಮೀನನ್ನು ಅಕ್ರಮ ದಾಖಲೆಗಳ ಮೂಲಕ ತಮ್ಮ ಹೆಸರಿಗೆ ವರ್ಗಾಯಿಸಿಕೊಳ್ಳಲು ಪ್ರಯತ್ನಿಸಿ, ತಮ್ಮ ಮೇಲೆ ದೌರ್ಜನ್ಯ ನಡೆಸುತ್ತಿರುವ ಎಂ. ಗೋವರ್ಧನ್ ಹಾಗೂ ಅವರ ಸಹಚರರ ವಿರುದ್ಧ ಕಾನೂನು ಕ್ರಮ ಕೈಗೊಂಡು ನ್ಯಾಯ ಒದಗಿಸಬೇಕು ಎಂದು ಚರಕುಂಟೆ ಗ್ರಾಮದ 13 ರೈತರು ಜಿಲ್ಲಾ ಪೊಲೀಸ್ ಅಧೀಕ್ಷಕರಿಗೆ ಮನವಿ ಮಾಡಿದ್ದಾರೆ.

ಶುಕ್ರವಾರ ಬಳ್ಳಾರಿ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿದ ರೈತರು, 1983ರಲ್ಲಿ ಸಂಜೀವರಾಯನಕೋಟೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸರ್ವೇ ನಂ.46ರಲ್ಲಿ ಒಟ್ಟು 15.50 ಎಕರೆ ಗೋಮಾಳ ಜಮೀನನ್ನು 13 ರೈತರಿಗೆ ಸರ್ಕಾರ ಮಂಜೂರು ಮಾಡಿತ್ತು.

ತಲಾ 1.25 ಎಕರೆ ಜಮೀನಿನಂತೆ ಮಂಜೂರು ಮಾಡಲಾಗಿದ್ದು, ಅಂದಿನಿಂದ ಇಂದಿನವರೆಗೆ ತಾವು ಜಮೀನನ್ನು ಸಾಗುವಳಿ ಮಾಡಿಕೊಂಡು ಜೀವನ ನಡೆಸುತ್ತಿದ್ದೇವೆ ಎಂದು ತಿಳಿಸಿದರು.

ಆದರೆ, ಎಂ. ಗೋವರ್ಧನ್ ಅವರು ನಕಲಿ ಹಾಗೂ ಅಕ್ರಮ ದಾಖಲೆಗಳನ್ನು ಸೃಷ್ಟಿಸಿ, ಸರ್ಕಾರದಿಂದ ಮಂಜೂರಾಗಿರುವ ಜಮೀನನ್ನು ತಮ್ಮ ಹೆಸರಿಗೆ ವರ್ಗಾಯಿಸಿಕೊಳ್ಳಲು ಪ್ರಯತ್ನಿಸಿದ್ದಾರೆ ಎಂದು ರೈತರು ಆರೋಪಿಸಿದರು. ಈ ಕುರಿತು ಸಹಾಯಕ ಆಯುಕ್ತರ ಕಚೇರಿಗೆ ದೂರು ಸಲ್ಲಿಸಿದ ಬಳಿಕ, ಸರ್ಕಾರದಿಂದ ಮಂಜೂರಾದ ಜಮೀನಿಗೆ ಸಂಬಂಧಿಸಿದ ಕ್ರಯ ವ್ಯವಹಾರಗಳನ್ನು ಅಮಾನ್ಯಗೊಳಿಸಿ, ಮೂಲ ಮಂಜೂರುದಾರರು ಅಥವಾ ಅವರ ನೇರ ವಾರಸುದಾರರ ಹೆಸರಿಗೆ ಜಮೀನು ವರ್ಗಾಯಿಸಿ ಪಹಣಿ ದಾಖಲಿಸುವಂತೆ ತಹಶೀಲ್ದಾರ್‌ಗೆ ಆದೇಶಿಸಲಾಗಿದೆ ಎಂದು ಹೇಳಿದರು.

ಇದರ ನಡುವೆಯೇ ಇತ್ತೀಚೆಗೆ ಗೋವರ್ಧನ್ ಅವರ ಕಡೆಯ ಸುಮಾರು 10ರಿಂದ 20 ಮಂದಿ ಹಾಗೂ ಮೂರು-ನಾಲ್ಕು ಟ್ರ್ಯಾಕ್ಟರ್‌ಗಳಲ್ಲಿ ಜಮೀನಿಗೆ ಬಂದು, ತಾವು ಬಿತ್ತನೆ ಮಾಡಿದ್ದ ಜಮೀನಿನಲ್ಲಿ ರಂಟೆ ಹೊಡೆದು ಬೆಳೆ ಹಾನಿಗೊಳಿಸಿದ್ದಾರೆ ಎಂದು ರೈತರು ದೂರಿದರು.

ಇದರಿಂದ ಸಾವಿರಾರು ರೂಪಾಯಿ ನಷ್ಟವಾಗಿದ್ದು, ಜಮೀನಿನಲ್ಲಿ ಕೃಷಿ ಕೆಲಸ ಮಾಡುತ್ತಿದ್ದ ಮಹಿಳೆಯರ ಮೇಲೂ ಹಲ್ಲೆಗೆ ಯತ್ನಿಸಲಾಗಿದೆ ಎಂದು ಆರೋಪಿಸಿದರು.

ಜಮೀನಿನ ವಿಚಾರವಾಗಿ ಪದೇಪದೇ ತಮ್ಮ ಮೇಲೆ ದೌರ್ಜನ್ಯ ನಡೆಸಲಾಗುತ್ತಿದೆ.

ಈ ಬಗ್ಗೆ ಈಗಾಗಲೇ ಜಿಲ್ಲಾ ಪೊಲೀಸ್ ಅಧೀಕ್ಷಕರಿಗೆ ದೂರು ನೀಡಿದ್ದು, ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಗೋವರ್ಧನ್ ಹಾಗೂ ಅವರ ಸಹಚರರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ರೈತರು ಒತ್ತಾಯಿಸಿದರು.

ತಮ್ಮ ಕುಟುಂಬಗಳ ಜೀವನಾಧಾರವಾಗಿರುವ ಸರ್ಕಾರ ಮಂಜೂರು ಮಾಡಿದ ಜಮೀನನ್ನು ರಕ್ಷಿಸಬೇಕು. ರೈತರಿಗೆ ಯಾವುದೇ ರೀತಿಯ ತೊಂದರೆ ಅಥವಾ ಬೆದರಿಕೆ ಉಂಟಾಗದಂತೆ ಸೂಕ್ತ ಪೊಲೀಸ್ ರಕ್ಷಣೆ ನೀಡಬೇಕು ಹಾಗೂ ಅಕ್ರಮ ದಾಖಲೆಗಳ ಕುರಿತು ತನಿಖೆ ನಡೆಸಿ ನ್ಯಾಯ ಒದಗಿಸಬೇಕು ಎಂದು 13 ರೈತರು ಮನವಿ ಮಾಡಿದರು.


## ಅಧಿವೇಶನಕ್ಕೆ ಅಡ್ಡಿ ಸೃಷ್ಟಿಸುವುದು ಕಾಂಗ್ರೆಸ್ ಉದ್ದೇಶ: ಜಿಗಜಿಣಗಿ

ವಿಜಯಪುರ, ಆ. 14:

ಸಂಸತ್ತಿನಲ್ಲಿ ದೇಶದ ಜನರ ಸಮಸ್ಯೆಗಳ ಕುರಿತು ಚರ್ಚೆ ನಡೆಸದೆ ಮುಂಗಾರು ಅಧಿವೇಶನ ಸುಸೂತ್ರವಾಗಿ ನಡೆಯಲು ಕಾಂಗ್ರೆಸ್ ಅಡ್ಡಿಪಡಿಸಿದೆ. ಅಧಿವೇಶನವನ್ನು ಅನಿರ್ದಿಷ್ಟಾವಧಿಗೆ ಮುಂದೂಡಿಸುವ ಮೂಲಕ ದೇಶದಲ್ಲಿ ಅರಾಜಕತೆ ಸೃಷ್ಟಿಸುವ ಹುನ್ನಾರ ನಡೆಸಿದೆ ಎಂದು ಸಂಸದ ರಮೇಶ ಜಿಗಜಿಣಗಿ ಆರೋಪಿಸಿದ್ದಾರೆ.

ಕಾಂಗ್ರೆಸ್ ಮುಕ್ತ ಭಾರತದತ್ತ ದೇಶದ ಜನರು ಹೆಜ್ಜೆ ಇಡುತ್ತಿರುವುದರಿಂದ ಕಾಂಗ್ರೆಸ್ ಹತಾಶಗೊಂಡಿದೆ.

ಚುನಾವಣೆಯಲ್ಲಿ ಸೋತಾಗ ಇವಿಎಂಗಳನ್ನು ದೂಷಿಸುವುದು, ಸಂಸತ್ ಕಲಾಪಕ್ಕೆ ಅಡ್ಡಿಪಡಿಸುವುದು, ದಂಗೆ ಹಾಗೂ ಅಶಾಂತಿಗೆ ಪ್ರಚೋದನೆ ನೀಡುವುದು ಕಾಂಗ್ರೆಸ್‌ನ ನಿರಂತರ ಚಟುವಟಿಕೆಯಾಗಿದೆ ಎಂದು ಅವರು ಟೀಕಿಸಿದ್ದಾರೆ.



ಪ್ರಸಕ್ತ ಅಧಿವೇಶನದಲ್ಲಿ ವಂದೇ ಮಾತರಂ ಮಸೂದೆ ಸೇರಿದಂತೆ 12 ಮಸೂದೆಗಳು ಅಂಗೀಕಾರವಾಗಿವೆ. ವಿರೋಧ ಪಕ್ಷಗಳ ಸದಸ್ಯರು ಪ್ರತಿಭಟನೆಯಲ್ಲಿ ನಿರತರಾಗಿದ್ದ ಸಂದರ್ಭದಲ್ಲಿ 11 ಮಸೂದೆಗಳು ಚರ್ಚೆಯಿಲ್ಲದೆ ಅಂಗೀಕಾರವಾಗಿವೆ.

ಸ್ವಾತಂತ್ರ್ಯ ಹೋರಾಟಕ್ಕೆ ಸ್ಫೂರ್ತಿಯಾಗಿದ್ದ ವಂದೇ ಮಾತರಂ ಗೀತೆಗೆ ಕಾಂಗ್ರೆಸ್ ಆರಂಭದಿಂದಲೂ ವಿರೋಧ ವ್ಯಕ್ತಪಡಿಸುತ್ತ ಬಂದಿದೆ. ಇದೀಗ ಮೋದಿ ಸರ್ಕಾರ ವಂದೇ ಮಾತರಂ ರಾಷ್ಟ್ರಗೀತೆಗೆ ಸಮಾನವಾದ ಸ್ಥಾನಮಾನ ಕಲ್ಪಿಸಿರುವುದು ಕಾಂಗ್ರೆಸ್‌ಗೆ ಅಸಹನೀಯವಾಗಿದೆ ಎಂದು ಜಿಗಜಿಣಗಿ ಹೇಳಿದ್ದಾರೆ.

ವಿದೇಶಗಳಿಂದ ವಿವಿಧ ಸಂಘ-ಸಂಸ್ಥೆಗಳಿಗೆ ಹರಿದುಬರುವ ದೇಣಿಗೆಗೆ ನಿಯಂತ್ರಣ ಹೇರುವ ಮೂಲಕ ಮತಾಂತರ ಸೇರಿದಂತೆ ಸಂವಿಧಾನ ವಿರೋಧಿ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಕ್ರಮ ಕೈಗೊಂಡಿದೆ. ಇಂತಹ ಮಹತ್ವದ ಕ್ರಮಗಳಿಗೆ ಕಾಂಗ್ರೆಸ್ ವಿರೋಧ ವ್ಯಕ್ತಪಡಿಸಿ ಅಧಿವೇಶನದ ಕಲಾಪಕ್ಕೆ ಅಡ್ಡಿಪಡಿಸಿದೆ ಎಂದು ಅವರು ಆರೋಪಿಸಿದ್ದಾರೆ.

ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದಲ್ಲಿ ಕೇಂದ್ರ ಸರ್ಕಾರ ಆರಂಭದಿಂದಲೂ ಕಠಿಣ ಕ್ರಮ ಕೈಗೊಂಡಿದೆ. ಈ ಹಿನ್ನೆಲೆಯಲ್ಲಿ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಿದ್ದರು. ಆದರೆ, ಜಾರ್ಖಂಡ್‌ನಲ್ಲಿ ತಮ್ಮದೇ ಪಕ್ಷದ ವಿರುದ್ಧ ನಡೆದ ಪ್ರತಿಭಟನೆ ವೇಳೆ ಲಾಠಿಚಾರ್ಜ್ ನಡೆದಾಗ ರಾಹುಲ್ ಗಾಂಧಿ ಏಕೆ ಧ್ವನಿ ಎತ್ತಲಿಲ್ಲ ಎಂದು ಜಿಗಜಿಣಗಿ ಪ್ರಶ್ನಿಸಿದ್ದಾರೆ.

ದೆಹಲಿಯ ಜಂತರ್‌ಮಂತರ್‌ಗೆ ತೆರಳಿದ ರಾಹುಲ್ ಗಾಂಧಿ ಜಾರ್ಖಂಡ್‌ಗೆ ಏಕೆ ತೆರಳಲಿಲ್ಲ ಎಂಬುದನ್ನು ಜನ ಗಮನಿಸುತ್ತಿದ್ದಾರೆ. ದೇಶದಲ್ಲಿ ಅರಾಜಕತೆ ಸೃಷ್ಟಿಸುವ ಪ್ರಯತ್ನವನ್ನು ಜನ ಎಂದಿಗೂ ಸಹಿಸುವುದಿಲ್ಲ. ಮುಂದಿನ ದಿನಗಳಲ್ಲಿ ಕಾಂಗ್ರೆಸ್‌ಗೆ ಜನತೆ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಸಂಸದ ರಮೇಶ ಜಿಗಜಿಣಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗುಟ್ಕಾ ನಿಷೇಧಕ್ಕೆ ಸ್ವಾಗತ; ಯುವಕರ ಆರೋಗ್ಯದೊಂದಿಗೆ ರಾಜಕೀಯ ಮಾಡಬಾರದು-ಎಸ್. ವಿ. ಪಾಟೀಲ

ವಿಜಯಪುರ : ಅಡಿಕೆ ಬೆಳೆಗಾರರ ಹಿತಾಸಕ್ತಿಯ ಹೆಸರಿನಲ್ಲಿ ಗುಟ್ಕಾ ಉತ್ಪನ್ನಗಳ ಪರ ನಿಲ್ಲುವ ರಾಜಕೀಯ ನಾಯಕರ ವಿರುದ್ಧ ತೀವ್ರ ಆಕ್ಷೇಪ ವ್ಯಕ್ತವಾಗಿದ್ದು, ಯುವಜನರ ಆರೋಗ್ಯದ ದೃಷ್ಟಿಯಿಂದ ಗುಟ್ಕಾ ನಿಷೇಧದಂತಹ ಕಠಿಣ ಕ್ರಮಗಳನ್ನು ಸ್ವಾಗತಿಸಬೇಕು ಎಂದು ಎಸ್.ವಿ. ಪಾಟೀಲ ಒತ್ತಾಯಿಸಿದ್ದಾರೆ.



ರಾಜ್ಯದಲ್ಲಿ ಲಕ್ಷಾಂತರ ಹೆಕ್ಟೇರ್ ಪ್ರದೇಶದಲ್ಲಿ ಅಡಿಕೆ ಬೆಳೆಯಲಾಗುತ್ತಿದ್ದು, ಅಡಿಕೆ ವಹಿವಾಟು ಸಾವಿರಾರು ಕೋಟಿ ರೂಪಾಯಿಗಳಷ್ಟಿದೆ. ಆದರೆ ಅಡಿಕೆಯನ್ನು ಮಿಶ್ರಣ ಮಾಡಿ ತಯಾರಿಸುವ ಗುಟ್ಕಾ ಹಾಗೂ ಇತರ ತಂಬಾಕು ಉತ್ಪನ್ನಗಳಿಂದ ಜನರ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತಿದೆ. ಅಡಿಕೆ ಬೆಳೆಗಾರರ ಹಿತ ಕಾಪಾಡುವ ನೆಪದಲ್ಲಿ ಯುವಜನರ ಆರೋಗ್ಯವನ್ನು ಬಲಿಕೊಡಬಾರದು ಎಂದು ಅವರು ಹೇಳಿದ್ದಾರೆ.

ಬಾಯಿ ಹಾಗೂ ಗಂಟಲು ಕ್ಯಾನ್ಸರ್ ಸೇರಿದಂತೆ ವಿವಿಧ ಗಂಭೀರ ಕಾಯಿಲೆಗಳಿಗೆ ಗುಟ್ಕಾ ಮತ್ತು ತಂಬಾಕು ಸೇವನೆ ಪ್ರಮುಖ ಅಪಾಯಕಾರಿ ಅಂಶವಾಗಿದೆ. ಇಂತಹ ಕಾಯಿಲೆಗಳಿಗೆ ತುತ್ತಾದ ಕುಟುಂಬಗಳು ವೈದ್ಯಕೀಯ ಚಿಕಿತ್ಸೆಗೆ ಅಪಾರ ಪ್ರಮಾಣದ ಹಣ ವ್ಯಯಿಸಬೇಕಾಗುತ್ತದೆ. ಚಿಕಿತ್ಸೆ ಪಡೆದರೂ ಸಂಪೂರ್ಣ ಗುಣಮುಖರಾಗುವ ಭರವಸೆ ಇಲ್ಲದ ಪರಿಸ್ಥಿತಿಯೂ ನಿರ್ಮಾಣವಾಗುತ್ತದೆ. ಹೀಗಾಗಿ ಯುವಜನರನ್ನು ಗುಟ್ಕಾ ಸೇರಿದಂತೆ ಮಾದಕ ಹಾಗೂ ತಂಬಾಕು ಉತ್ಪನ್ನಗಳಿಂದ ದೂರವಿಡುವುದು ಅತ್ಯಂತ ಅಗತ್ಯವಾಗಿದೆ ಎಂದು ಅವರು ತಿಳಿಸಿದ್ದಾರೆ.

ಗುಟ್ಕಾ ಕುರಿತು ಆರೋಗ್ಯ ಸಚಿವ ಯು.ಟಿ. ಖಾದರ್ ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕೈಗೊಂಡಿರುವ ನಿಲುವು ಸ್ವಾಗತಾರ್ಹ. ಆದರೆ ಗುಟ್ಕಾ ನಿಷೇಧದ ಬಳಿಕ ಅದೇ ರೀತಿಯ ಹಾನಿಕಾರಕ ಉತ್ಪನ್ನಗಳು ಬೇರೆ ರೂಪದಲ್ಲಿ ಮಾರುಕಟ್ಟೆಗೆ ಪ್ರವೇಶಿಸದಂತೆ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಅಡಿಕೆ ಬೆಳೆಗಾರರ ಹಿತಾಸಕ್ತಿಯ ಹೆಸರಿನಲ್ಲಿ ಲಕ್ಷಾಂತರ ಜನರ ಆರೋಗ್ಯಕ್ಕೆ ಅಪಾಯ ತಂದೊಡ್ಡುವ ಉತ್ಪನ್ನಗಳ ಪರ ವಾದಿಸುವ ರಾಜಕಾರಣಿಗಳು ತಮ್ಮ ಸ್ವಾರ್ಥದ ಆಚೆಗೆ ಯೋಚಿಸಬೇಕು. ಯುವಜನರ ಭವಿಷ್ಯ ಹಾಗೂ ಸಾರ್ವಜನಿಕ ಆರೋಗ್ಯವೇ ಮೊದಲ ಆದ್ಯತೆಯಾಗಬೇಕು ಎಂದು ಎಸ್.ವಿ. ಪಾಟೀಲ ಹೇಳಿದ್ದಾರೆ.

# ಸೆ.25ಕ್ಕೆ 'ರುದ್ರಾಭಿಷೇಕಂ' ಚಿತ್ರ ಬಿಡುಗಡೆ

ಬೆಂಗಳೂರು, ಆ. 14:

'ಪ್ಯಾನ್ ಇಂಡಿಯಾ ಕ್ರಿಯೇಷನ್ಸ್' ವಿಜಯಪುರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆ ಸಂಸ್ಥೆಯಡಿ ನಿರ್ಮಾಣಗೊಂಡಿರುವ ನ್ಯಾಚುರಲ್ ಸ್ಟಾರ್ ವಿಜಯ ರಾಘವೇಂದ್ರ ದ್ವಿಪಾತ್ರದಲ್ಲಿ ಅಭಿನಯಿಸಿರುವ 'ರುದ್ರಾಭಿಷೇಕಂ' ಕನ್ನಡ ಚಿತ್ರ ಸೆ.25ರಂದು ರಾಜ್ಯಾದ್ಯಂತ ಅದ್ದೂರಿಯಾಗಿ ತೆರೆಕಾಣಲಿದೆ.

ಈ ಚಿತ್ರದ ಮೂಲಕ 'ಪ್ಯಾನ್ ಇಂಡಿಯಾ ಕ್ರಿಯೇಷನ್ಸ್' ಸಂಸ್ಥೆ ಕನ್ನಡ ಚಲನಚಿತ್ರರಂಗಕ್ಕೆ ಪದಾರ್ಪಣೆ ಮಾಡುತ್ತಿದೆ. ಚಿತ್ರದಲ್ಲಿ ನಟ ವಿಜಯ ರಾಘವೇಂದ್ರ ಅವರು ವಿಶಿಷ್ಟವಾದ ವೀರಗಾಸೆ ಪಾತ್ರದಲ್ಲಿ ಕಾಣಿಸಿಕೊಂಡಿದ್ದು, ಈ ಪಾತ್ರಕ್ಕಾಗಿ ವಿಭಿನ್ನ ರೀತಿಯಲ್ಲಿ ಅಭಿನಯಿಸಿದ್ದಾರೆ.



ವೀರಭದ್ರ ಸ್ವಾಮಿಯ ಜಾನಪದ ಕಥೆಯನ್ನು ಹಿನ್ನೆಲೆಯಾಗಿಸಿಕೊಂಡಿರುವ ಈ ಸಾಹಸಮಯ ಚಿತ್ರದಲ್ಲಿ ವಿಜಯ ರಾಘವೇಂದ್ರ ಅವರು ಈ ಹಿಂದೆ ಕಾಣದಂತಹ ವಿಭಿನ್ನ ಹಾಗೂ ಶಕ್ತಿಶಾಲಿ ಪಾತ್ರದಲ್ಲಿ ಅಭಿನಯಿಸಿದ್ದಾರೆ. ನಾದಬ್ರಹ್ಮ ವಿ. ಮನೋಹರ್ ಅವರ ಸಂಗೀತ ಸಂಯೋಜನೆ ಹಾಗೂ ಟ್ರೈಲರ್ ಮಂಜು ಅವರ ಭರ್ಜರಿ ಸಾಹಸ ದೃಶ್ಯಗಳು ಚಿತ್ರದ ಪ್ರಮುಖ ಆಕರ್ಷಣೆಯಾಗಿವೆ. ದೇವನಹಳ್ಳಿ, ಗೋಕರ್ಣ, ಹೊನ್ನಾವರ, ಕುಮಟಾ, ಅಬ್ಬಕ್ಕ ಕೋಟೆ ಹಾಗೂ ಅಘನಾಶಿನಿ ಹಿನ್ನೀರು ಪ್ರದೇಶಗಳಲ್ಲಿ 50ಕ್ಕೂ ಹೆಚ್ಚು ದಿನಗಳ ಕಾಲ ಚಿತ್ರೀಕರಣ ನಡೆಸಲಾಗಿದೆ. ಚಿತ್ರದ ಕುರಿತು ಕನ್ನಡ ಕಲಾಭಿಮಾನಿಗಳಲ್ಲಿ ಈಗಾಗಲೇ ಭಾರಿ ಕುತೂಹಲ ಮೂಡಿದ್ದು, ಸೆ.25ರಂದು ಅದ್ದೂರಿಯಾಗಿ ಚಿತ್ರ ಬಿಡುಗಡೆಯಾಗಲಿದೆ ಎಂದು ನಿರ್ದೇಶಕ ವಸಂತಕುಮಾರ್ ತಿಳಿಸಿದ್ದಾರೆ.

ಚಿತ್ರದಲ್ಲಿ ವಿಜಯ ರಾಘವೇಂದ್ರ ನಾಯಕನಾಗಿ, 'ಮಿಲ್ಕ್ ಬ್ಯೂಟಿ' ಪ್ರಿಯಾಂಕಾ ತಿಮ್ಮೇಶ್ ನಾಯಕಿಯಾಗಿ ನಟಿಸಿದ್ದಾರೆ. ರಾಜ್ ಬಲವಾಡಿ, ವಸಂತಕುಮಾರ್, ಮನು, ಬುಲೆಟ್ ವಿನು, ಸಂದೀಪ್, ಸನತ್, ಸೌಂದರ್ಯ, ನವನೀತ್, ಮಮತಾ ಹಾಗೂ ಸ್ವಾತಿ ಸೇರಿದಂತೆ ಹಲವರು ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಿದ್ದಾರೆ. ತಾಂತ್ರಿಕ ವರ್ಗದಲ್ಲಿ ಛಾಯಾಗ್ರಹಣ ಮುತುರಾಜ್, ಸಂಗೀತ ವಿ. ಮನೋಹರ್, ನೃತ್ಯ ಸಂಯೋಜನೆ ಭಜರಂಗಿ ಮೋಹನ್, ಸಾಹಸ ನಿರ್ದೇಶನ ಟ್ರೈಲರ್ ಮಂಜು, ಕಲಾ ನಿರ್ದೇಶನ ಬಾಬುಖಾನ್, ಸಂಕಲನ ನೋಟವಿನಕೆರೆಯ ಕುಮಾರ್ ಪ್ರಸಾದ್, ಸಂಕಲನದಲ್ಲಿ ಮುತುರಾಜ್ ಟಿ., ಸಂಭಾಷಣೆ ಹಾಗೂ ಚಿತ್ರಕಥೆ-ನಿರ್ದೇಶನ ವಸಂತಕುಮಾರ್ ಅವರದ್ದಾಗಿದೆ. ನಾಗೇಂದ್ರ, ಡಾ. ಪ್ರಭು ಗಂಜಿಹಾಳ, ಡಾ. ವೀರೇಶ್ ಹಂಡಗಿ ಪಿ.ಆರ್.ಒ., ಸಹ ನಿರ್ದೇಶಕರಾಗಿ ಮನು ಹಾಗೂ ಧೀರಜ್ ಸೇರಿದಂತೆ ಹಲವರು ಚಿತ್ರ ನಿರ್ಮಾಣದಲ್ಲಿ ಕೈಜೋಡಿಸಿದ್ದಾರೆ.

# ದಲಿತ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಪದಾಧಿಕಾರಿಗಳ ನೇಮಕ



ದಲಿತ ಸಾಹಿತ್ಯ ಪರಿಷತ್ ರಾಜ್ಯಾಧ್ಯಕ್ಷ ಡಾ. ಅರ್ಜುನ ಗೊಳಸಂಗಿ ಹಾಗೂ ವಿಭಾಗೀಯ ಸಂಯೋಜಕ ಮೋಹನ ಕಟ್ಟಿಮನಿ ಅವರ ನಿರ್ದೇಶನದಂತೆ, ವಿಜಯಪುರ ಜಿಲ್ಲಾ ಘಟಕದ ಅಧ್ಯಕ್ಷ ರವಿ ಕಿತ್ತೂರ ಅವರು ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಿದ್ದಾರೆ.

ದಲಿತ ಹೋರಾಟಗಾರರಾದ ಅಭಿಷೇಕ ಚಕ್ರವರ್ತಿ ಹಾಗೂ ಶ್ರೀನಾಥ ಪೂಜಾರಿ ಅವರಿಂದ ನೂತನ ಪದಾಧಿಕಾರಿಗಳಿಗೆ ಅಧಿಕೃತ ಆದೇಶ ವಿತರಿಸಲಾಯಿತು.

ಜಿಲ್ಲಾ ಘಟಕದ ಉಪಾಧ್ಯಕ್ಷರಾಗಿ ಮೊಹ್ಮದ್ ಗೌಸ್ ಹವಾಲ್ದಾರ್, ಪ್ರಧಾನ ಕಾರ್ಯದರ್ಶಿಯಾಗಿ ಸುರೇಶ ಬಿಜಾಪುರ, ಖಜಾಂಚಿಯಾಗಿ ಭಾಗ್ಯಶ್ರೀ ದೊಡ್ಡಮನಿ ಅವರನ್ನು ನೇಮಕ ಮಾಡಲಾಗಿದೆ. ನಿರ್ದೇಶಕರಾಗಿ ರೂಪಾ ಕೆ. ಮತ್ತಿಕೆರಿ, ಪ್ರಭುಗೌಡ ಪಾಟೀಲ ಹಾಗೂ ಮೋಹನ ಮೇಟಿ, ಮಾಧ್ಯಮ ಸಲಹೆಗಾರರಾಗಿ ಮೊಹ್ಮದ್ ಯೂಸುಫ್ ನೆವಾರ ಹಾಗೂ ದಿಲೀಪ ನರಸಿಂಗ್ ಸಿಂಧೆ ಅವರನ್ನು ನೇಮಕ ಮಾಡಲಾಗಿದೆ.

ಜಿಲ್ಲೆಯಲ್ಲಿ ಸಾಹಿತ್ಯಿಕ ಚಟುವಟಿಕೆಗಳಿಗೆ ಉತ್ತೇಜನ ನೀಡುವುದು, ಯುವಕರಲ್ಲಿ ಸಾಹಿತ್ಯದ ಆಸಕ್ತಿ ಹಾಗೂ ಸಾಹಿತ್ಯಶಕ್ತಿಯನ್ನು ಬೆಳೆಸುವುದು ಸೇರಿದಂತೆ ದಲಿತ ಸಾಹಿತ್ಯ ಕ್ಷೇತ್ರದ ಅಭಿವೃದ್ಧಿಗೆ ಸಂಘಟಿತವಾಗಿ ಕಾರ್ಯನಿರ್ವಹಿಸುವುದಾಗಿ ನೂತನ ಪದಾಧಿಕಾರಿಗಳು ತಿಳಿಸಿದರು.

## ಸ್ವಾತಂತ್ರ್ಯೋತ್ಸವದ ಅಂಗವಾಗಿ ವನಶ್ರೀ ಆಶ್ರಮದಲ್ಲಿ ಸಸ್ಯೋತ್ಸವ

80ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ವಿಶ್ವಕಲ್ಯಾಣ ಪ್ರಕೃತಿ ಆರೋಗ್ಯ ಆಶ್ರಮ ಹಾಗೂ ವನಶ್ರೀ ಆರೋಗ್ಯ ಆಶ್ರಮದ ಸಂಯುಕ್ತ ಆಶ್ರಯದಲ್ಲಿ ಆಗಸ್ಟ್ 15ರಂದು ಮಧ್ಯಾಹ್ನ 3 ಗಂಟೆಗೆ ವನಶ್ರೀ ಆಶ್ರಮದ ಮುಂಭಾಗದಲ್ಲಿ ಸಸ್ಯೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದಲ್ಲಿ ವಿಜಯಪುರ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಹೆಚ್ಚುವರಿ ಜಿಲ್ಲಾಧಿಕಾರಿ ಡಾ. ಉದಯರಾಮ, ಉಪವಿಭಾಗಾಧಿಕಾರಿ ಗುರುನಾಥ ದಡ್ಡಿ, ತಹಶೀಲ್ದಾರ್ ಪ್ರಶಾಂತ ಚನ್ನಗೊಂಡ, ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ ಸೇರಿದಂತೆ ವಿಶ್ವಕಲ್ಯಾಣ ಪ್ರಕೃತಿ ಆರೋಗ್ಯ ಆಶ್ರಮ ಹಾಗೂ ವನಶ್ರೀ ಆಶ್ರಮದ ಪದಾಧಿಕಾರಿಗಳು ಭಾಗವಹಿಸಲಿದ್ದಾರೆ. ಸಸ್ಯೋತ್ಸವದಲ್ಲಿ ಜಿಲ್ಲೆಯ ಸಾರ್ವಜನಿಕರು ಹಾಗೂ ವಿವಿಧ ಸಂಘ-ಸಂಸ್ಥೆಗಳ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಪತ್ರಿಕಾ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.